# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 29 RNI Number : KNKAN/25/A2770 02-02-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :29 ರಾಯಚೂರು 02-02-2026 ಸೋಮವಾರ ಪುಟ 04 ಬೆಲೆ ರೂ.2/- ಮೊ:8660146563


## ಕೇಂದ್ರ ಬಜೆಟ್- 2026: ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ, ಆಯುರ್ವೇದ ಚಿಕಿತ್ಸಾ ಪದ್ಧತಿಗೆ ಮರುಜೀವ

ನವದೆಹಲಿ,ಫೆ.01-

2026-27ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆರೋಗ್ಯ ಕ್ಷೇತ್ರಕ್ಕೆ ಗಮನಾರ್ಹ ಆದ್ಯತೆ ನೀಡಿದ್ದಾರೆ. ವೈದ್ಯರು ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚಿನ ಪ್ರಾಬಲ್ಯ ಸಾಧಿಸಿದ್ದಾರೆ. ಬಜೆಟ್‌ನಲ್ಲಿ ಇರುವ ಪ್ರಮುಖ ಅಂಶಗಳು ಹೀಗಿವೆ.


ಇದರ ಜೊತೆಗೆ, ವೃದ್ಧಾಪ್ಯದ ಮತ್ತು ಸಂಬಂಧಿತ ಆರೈಕೆಗಾಗಿ ಮುಂದಿನ ಒಂದು ವರ್ಷದಲ್ಲಿ 1.5 ಲಕ್ಷ ಆರೈಕೆದಾರರಿಗೆ ತರಬೇತಿ ನೀಡಲಾಗುವುದು. ಈ ಆರೈಕೆದಾರರು ಬಹು ವಿಧಗಳಲ್ಲಿ ಕಾರ್ಯನಿವಹಿಸಲಿದ್ದಾರೆ. ಅವರಿಗೆ ಆರೈಕೆಯಲ್ಲಿ ಮಾತ್ರವಲ್ಲ, ಯೋಗಕ್ಷೇಮ, ಯೋಗ ಮತ್ತು ವೈದ್ಯಕೀಯ ಮತ್ತು ಸಹಾಯಕ ಸಾಧನಗಳನ್ನು ಬಳಸಲು ತರಬೇತಿ ನೀಡಲಾಗುವುದು.

ಕೇಂದ್ರ ಹಣಕಾಸು ಸಚಿವರ ಭಾಷಣದಲ್ಲಿನ ಅತ್ಯಂತ ಮಹತ್ವದ ವಿಷಯಗಳಲ್ಲಿ ತಂತ್ರಜ್ಞಾನ ಅಥವಾ ರಫ್ತು. ದೇಶದ ಬಡ ಕುಟುಂಬಗಳು ವೈದ್ಯಕೀಯ ವೆಚ್ಚ ಭರಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ, ಜಿಲ್ಲಾ ಆಸ್ಪತ್ರೆಗಳಲ್ಲಿ ತುರ್ತು ಮತ್ತು ಅಪಘಾತ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಇವು ಈಗಿನ ಸಂಖ್ಯೆಗಿಂತ ಶೇಕಡಾ 50ರಷ್ಟು ಹೆಚ್ಚು. ಇದು ಬಡವರಿಗೆ ನೆರವಾಗುವ ಆರೋಗ್ಯ ರಕ್ಷಣಾ ನೀತಿಯಾಗಿದೆ ಎಂದು ಸರ್ಕಾರ ಬಜೆಟ್‌ನಲ್ಲಿ ತಿಳಿಸಿದೆ.

ಮಾನಸಿಕ ಆರೋಗ್ಯಕ್ಕೆ ಕಾಯಕಲ್ಪ: ದೇಶದಲ್ಲಿ ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದಂತೆ ಅಭಿಯಾನಗಳು ಮತ್ತು ಸಹಾಯವಾಣಿಗಳು ಮಾತ್ರ ಚಾಲ್ತಿಯಲ್ಲಿವೆ. ಈ ಬಜೆಟ್‌ನಲ್ಲಿ ಇದಕ್ಕೆ ಸ್ವಲ್ಪ ಬದಲಾವಣೆ ತರಲಾಗಿದೆ. ರಾಂಚಿ ಮತ್ತು ತೇಜ್‌ಪುರದಲ್ಲಿ ಮಾನಸಿಕ ಆರೋಗ್ಯ ಸಂಸ್ಥೆಗಳನ್ನು ನಿಮ್ಹಾನ್ಸ್-2 ಯೋಜನೆಯಡಿ ಆರಂಭಿಸಲು ಘೋಷಿಸಲಾಗಿದೆ. ಈವರೆಗೂ ದೇಶದ ಏಕೈಕ ರಾಷ್ಟ್ರೀಯ ಮಾನಸಿಕ ಆರೋಗ್ಯ ಸಂಸ್ಥೆ ಬೆಂಗಳೂರಿನಲ್ಲಿದೆ.

15 ರಿಂದ 24 ವರ್ಷ ವಯಸ್ಸಿನ ಯುವ ಭಾರತೀಯರಲ್ಲಿ ಹೆಚ್ಚುತ್ತಿರುವ ಆತಂಕ, ಖಿನ್ನತೆ ಮತ್ತು ಸಾಮಾಜಿಕ, ಮಾಧ್ಯಮ-ಸಂಬಂಧಿತ ಯಾತನೆಯ ಬಗ್ಗೆ ಆರ್ಥಿಕ ಸಮೀಕ್ಷೆಯಲ್ಲಿ ಎಚ್ಚರಿಕೆ ನೀಡಿದ ಬಳಿಕ ನಿಮ್ಹಾನ್ಸ್ ಸ್ಥಾಪನೆಗೆ ಮುಂದಾಗಲಾಗಿದೆ.

ವೈದ್ಯಕೀಯ ಪ್ರವಾಸೋದ್ಯಮ: ವೈದ್ಯಕೀಯ ಪ್ರವಾಸೋದ್ಯಮವನ್ನು ಉತ್ತೇಜಿಸಲು ಐದು ಪ್ರಾದೇಶಿಕ ವೈದ್ಯಕೀಯ ಕೇಂದ್ರಗಳನ್ನು ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಆಸ್ಪತ್ರೆಗಳು, ಸಂಶೋಧನೆ, ಶಿಕ್ಷಣ, ಆಯುಷ್ ಕೇಂದ್ರಗಳು, ರೋಗನಿರ್ಣಯ ಮತ್ತು ಪುನರ್ವಸತಿಗಳನ್ನು ಇದು ಸಂಯೋಜಿಸುತ್ತದೆ.



ಆಯುರ್ವೇದಕ್ಕೆ ಮರುಜೀವ: 2026 ರ ಬಜೆಟ್‌ನ ಪ್ರಮುಖ ಅಂಶಗಳಲ್ಲಿ, ಆಯುರ್ವೇದಕ್ಕೆ ಮರುಜೀವನ ನೀಡುವ ಯೋಜನೆ. ದೇಶದಲ್ಲಿ ಮೂರು ಹೊಸ ಅಖಿಲ ಭಾರತ ಆಯುರ್ವೇದ ಸಂಸ್ಥೆಗಳು, ನವೀಕರಿಸಿದ ಆಯುಷ್ ಔಷಧಾಲಯಗಳು ಮತ್ತು ಔಷಧ ಪರೀಕ್ಷಾ ಪ್ರಯೋಗಾಲಯಗಳು, ಜಾಮ್‌ನಗರದಲ್ಲಿ ಉದ್ದೇಶಿಸಲಾದ ಜಾಗತಿಕ ಸಾಂಪ್ರದಾಯಿಕ ಔಷಧ ಕೇಂದ್ರ ಸ್ಥಾಪನೆಗೆ ನಿರ್ಧರಿಸಲಾಗಿದೆ. ಔಷಧೀಯ ಗಿಡಮೂಲಿಕೆಗಳನ್ನು ಬೆಳೆಸುವ ರೈತರು, ಅವುಗಳ ಉತ್ಪನ್ನಗಳನ್ನು ವಿದೇಶಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ರಫ್ತು ಮಾಡಲು ಉದ್ದೇಶಿಸಲಾಗಿದೆ.

## ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಸಿಕ್ಕಿದ್ದೇನು..?



ನವದೆಹಲಿ,ಫೆ.1-

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸಂಸತ್‌ನಲ್ಲಿ ಮಂಡಿಸಿದ 2026-27ನೇ ಸಾಲಿನ ಬಜೆಟ್‌ನಲ್ಲಿ ಘೋಷಣೆ ಮಾಡಿದ 7 ಹೈಸ್ಪೀಡ್ ರೈಲ್ವೆ ಕಾರಿಡಾರ್ ಯೋಜನೆಯಲ್ಲಿ 2 ಕರ್ನಾಟಕಕ್ಕೆ ದಕ್ಕಿವೆ.

ಹೈದ್ರಾಬಾದ್-ಬೆಂಗಳೂರು ಮತ್ತು ಬೆಂಗಳೂರು-ಚೆನ್ನೈ ನಡುವೆ ಹೈಸ್ಪೀಡ್ ರೈಲ್ವೆ ಕಾರಿಡಾರ್ ಯೋಜನೆಯನ್ನು ನಿರ್ಮಲಾ ಸೀತಾರಾಮನ್ ಅವರು ಘೋಷಣೆ ಮಾಡಿದ್ದಾರೆ.

ತಮ ಬಜೆಟ್‌ನಲ್ಲಿ ಒಟ್ಟು 7 ಹೈಸ್ಪೀಡ್ ರೈಲ್ವೆ ಕಾರಿಡಾರ್ ಯೋಜನೆಗಳನ್ನು ಘೋಷಣೆ ಮಾಡಿರುವ ಅವರು, ಮುಂಬೈ-ಪುಣೆ, ಪುಣೆ-ಹೈದ್ರಾಬಾದ್ ಸೇರಿದಂತೆ ಮುಂದಿನ ದಿನಗಳಲ್ಲೂ ಅಗತ್ಯವಿರುವ ಕಡೆಯೂ ಸ್ಥಾಪಿಸುವುದಾಗಿ ತಿಳಿಸಿದರು.

3ನೇ ಪುಟಕ್ಕೆ

### ಜಿಲ್ಲಾಡಳಿತದ ವತಿಯಿಂದ ಶ್ರೀ ಮಡಿವಾಳ ಮಾಡಿದೇವ ಜಯಂತಿ ಆಚರಣೆ

## ಮಡಿವಾಳ ಮಾಚಿದೇವರ ಮಾರ್ಗದಲ್ಲಿ ನಡೆಯರಿ: ಪರಮೇಶ್ವರ ಸಾಲಿಮಠ

ರಾಯಚೂರು ಫೆ.01

ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ತೋರಿದ ಹಾದಿಯಲ್ಲಿ ಮಡಿವಾಳ ಮಾಚಿದೇವರು ನಡೆದು, ಎಲ್ಲ ಶರಣರ ವಚನ ಸಾಹಿತ್ಯವನ್ನು ಸಂರಕ್ಷಣೆ ಮಾಡಿದರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ನಡೆಯಬೇಕೆಂದು ಸೀತಾ ಸುಬ್ಬರಾಜು ಸ್ಮಾರಕ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯರಾದ ಪರಮೇಶ್ವರ ಸಾಲಿಮಠ ಅವರು ಹೇಳಿದರು.



ಫೆ.01ರ ಭಾನುವಾರ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಡಿವಾಳ ಮಾಡಿದೇವ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಸಾಮಾಜಿಕ ವ್ಯವಸ್ಥೆಯ ಕೆಳ ಸ್ಥರದಲ್ಲಿದ್ದ ಜಾತಿಗಳಿಗೆ ವಿದ್ಯೆ ಕಲಿಯಲು ಅವಕಾಶ ಇಲ್ಲದ ದಿನಗಳಲ್ಲಿ ಸಾಕಷ್ಟು ವಿಷಯಗಳನ್ನು ಅಧ್ಯಯನ ಮಾಡಿ ಪಾಂಡಿತ್ಯ ಗಳಿಸಿದ್ದವರು ವೀರ ಗಣಾಚಾರಿ ಮಡಿವಾಳ ಮಾಚಿದೇವರು. ಬಸವಣ್ಣನವರು ಮಾಚಿದೇವರನ್ನು ತಂದೆ ಎಂದು ಕರೆದಿದ್ದರು. ಇದು ಮಾಚಿದೇವರ ಮೇಲಿರುವ ಬಸವಣ್ಣನವರ ಗೌರವದ ಪ್ರತೀಕ ಎಂದು ಹೇಳಿದರು.

ಮಡಿವಾಳ ಕುಲದಲ್ಲಿ ಹುಟ್ಟಿದ್ದರೂ ಮಾಚಯ್ಯ ಉತ್ತಮ ಶಿಕ್ಷಣ ಮತ್ತು ಶರಣರ ಸಂಪರ್ಕದಿದ ಮಹಾಪುರುಷರಾದರು. ಕಲ್ಯಾಣ ಕ್ರಾಂತಿಯ ಇತಿಹಾಸದಲ್ಲಿ ಮಾಚಯ್ಯ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರು. ಜ್ಞಾನಜ್ಯೋತಿಯಿಂದ ಲೋಕವನ್ನು ಬೆಳಗಿಸಿದ ಮಾಚಯ್ಯ ನುಡಿದಂತೆ ನಡೆದ, ನಡೆದಂತೆ ನುಡಿದ ಶರಣರಲ್ಲಿ ಒಬ್ಬರು. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅಧಿಕಾರವಿದೆ ಎಂದು ತಿಳಿಸಿ ಸರ್ವರಿಗೂ ಆಧ್ಯಾತ್ಮಿಕ ಉನ್ನತಿ ಪಡೆಯುವಂತೆ ಪ್ರೋತ್ಸಾಹಿಸಿದರು.

ಈ ವೇಳೆ ಸಮಾಜದ ಜಿಲ್ಲಾಧ್ಯಕ್ಷರಾದ ಜಂಬಣ್ಣ ಅವರು ಮಾತನಾಡಿ, ಜಾತಿ ಪದ್ಧತಿ ಹೋಗಲಾಡಿಸಲು ಅನೇಕ ಶರಣರು ಶ್ರಮಿಸಿದ್ದು, ಅವರಲ್ಲಿ ಮಡಿವಾಳ ಮಾಚಿದೇವ ಪ್ರಮುಖರಾಗಿದ್ದಾರೆ. ಅವರ ಆಚಾರ ವಿಚಾರವನ್ನು ಸಮಾಜದವರು ಪ್ರತಿಯೊಬ್ಬರೂ ಪಾಲಿಸಬೇಕು ಎಂದರು.

ಡಾ. ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಎಲ್ಲರಿಗೂ ಅವಕಾಶಗಳನ್ನು ನೀಡಲಾಗಿದ್ದು, ಅವುಗಳನ್ನು ಸರಿಯಾಗಿ ಬಳಸಿಕೊಳ್ಳುವ ಮೂಲಕ ಸಮಾಜದ ಅಭಿವೃದ್ಧಿಗೆ

3ನೇ ಪುಟಕ್ಕೆ

## ರಾಯಚೂರು ಉತ್ಸವ: ಕೃತಕ ಅರಣ್ಯ ಪರಿಕಲ್ಪನೆಯ ಕಾರ್ಯಕ್ರಮಕ್ಕೆ ಚಾಲನೆ




ರಾಯಚೂರು ಫೆ.01

ರಾಯಚೂರು ಜಿಲ್ಲಾ ಉತ್ಸವದ ನಿಮಿತ್ತ ಅರಣ್ಯ ಇಲಾಖೆಯು ಕೃತಕ ಅರಣ್ಯ ಪರಿಕಲ್ಪನೆ ಜನಾಕರ್ಷಣೀಯ ವಿನೂತನ ಯೋಜನೆ ರೂಪಿಸಿದೆ.

ಬಸವೇಶ್ವರ ವೃತ್ತದ ಹತ್ತಿರ ಇರುವ ವಾಲ್ಕಟ್ ಮೈದಾನದಲ್ಲಿ ಕೃತಕ ಅರಣ್ಯ ನಿರ್ಮಿಸಿದ್ದು ಜನರನ್ನು ಕೈ ಬೀಸಿ ಕರೆಯುತ್ತಿದೆ.

ಈ ಕಾರ್ಯಕ್ರಮಕ್ಕೆ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಫೆಬ್ರವರಿ 1ರಂದು ಚಾಲನೆ ನೀಡಿದರು.

ಕಾಡಿನಲ್ಲಿನ ನೀರು ಜಾಡು, ತೊರೆ, ತಗ್ಗು, ಗಿಡ ಮರ, ಬಳ್ಳಿ, ಆನೆ, ನೀರುಗೋಳಿ, ಕೊಕ್ಕರೆ, ಬೆಳ್ಳಕ್ಕಿ ಸೇರಿದಂತೆ ಬಗೆಬಗೆಯ ಕಾಡು ಪ್ರಾಣಿಗಳ ಚಿತ್ರಗಳು ಇಲ್ಲಿ ಗಮನ ಸೆಳೆಯುತ್ತವೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ, ಅರಣ್ಯ ಇಲಾಖೆಯ ನಾಗರಾಜ್ ಸೇರಿದಂತೆ ವಿವಿಧ ಹಂತದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸುರಕ್ಷತೆ ಕ್ರಮ ಕೈಗೊಳ್ಳಲು ಸೂಚನೆ

ರಾಯಚೂರು ಫೆ.01-

ಜಿಲ್ಲೆಯ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ಸರ್ಕಾರಿ ವಸತಿ ನಿಲಯಗಳಲ್ಲಿ ವಾಸವಾಗಿರುವ ವಿದ್ಯಾರ್ಥಿಗಳ ಸುರಕ್ಷತೆ ಕುರಿತಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ರಾಯಚೂರು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಈಶ್ವರ್ ಕಾಂದೂ ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶಾಲಾ ಸಂಕೀರ್ಣಗಳಲ್ಲಿ ಯಾವುದೇ ಅಹಿತಕರ ಘಟನೆ/ಅವಘಡಗಳಿಂದ ಹಾನಿ ಉಂಟಾಗದಂತೆ ಸುರಕ್ಷತೆ ಕಲ್ಪಿಸುವ ನಿಟ್ಟಿನಲ್ಲಿ ಶಾಲಾ ಕಟ್ಟಡಗಳನ್ನು ಸುಸ್ಥಿತಿಯಲ್ಲಿರಿಸಿಕೊಳ್ಳಲು ಹಾಗೂ ಶಾಲಾ ಆವರಣದಲ್ಲಿ ವಿದ್ಯುತ್ ಪ್ರಸರಣ ನಿಗಮದ ಪರಿವರ್ತಕಗಳು ಹಾಗೂ ವಿದ್ಯುತ್ ಸರಬರಾಜಿನ ತಂತಿಗಳು/ಕಂಬಗಳು ಅಲ್ಲದೇ ಶಿಥಿಲಾವಸ್ಥೆಯಲ್ಲಿರುವ ಕೊಠಡಿ/ನಿರ್ಮಾಣ ವಿನ್ಯಾಸಗಳು, ಅಸುರಕ್ಷಿತ ಸ್ಥಿತಿಯಲ್ಲಿರುವ ಹೆಮ್ಮರಗಳು ಇತ್ಯಾದಿಗಳಿಂದ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಹಾನಿಯಾಗದಂತೆ ಅಗತ್ಯ ಸುರಕ್ಷತೆಯ ಮುಂಜಾಗೃತಾ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.

ಶಾಲಾ ಆವರಣದಲ್ಲಿರುವ ವಿದ್ಯುತ್ ವಾಹಕ ತಂತಿ/ಕಂಬ/ಪರಿವರ್ತಕಗಳನ್ನು ಶಾಲಾ ಆವರಣದಿಂದ ತಕ್ಷಣ ಸ್ಥಳಾಂತರಿಸಲು ಆಯಾ ಕ್ಷೇತ್ರದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು.

ಶಾಲಾ ವಿದ್ಯಾರ್ಥಿಗಳಿಗೆ ಸುರಕ್ಷಿತ ವಾತಾವರಣದಲ್ಲಿ ವಿದ್ಯಾಭ್ಯಾಸದ ವ್ಯವಸ್ಥೆ ಕಲ್ಪಿಸಲು ಸೂಚಿಸಿದೆ. ಅಲ್ಲದೇ, ಶಾಲೆ/ಶಾಲಾ ಕೊಠಡಿಗಳಲ್ಲಿನ ವಿದ್ಯುತ್ ಸಂಪರ್ಕ ( ) ವ್ಯವಸ್ಥೆ ಸುರಕ್ಷಿತವಾಗಿದೆ ಎಂಬ ಬಗ್ಗೆ ಸಂಬಂಧ ಪಟ್ಟ ಶಾಲೆಗಳ ಮುಖ್ಯ ಗುರುಗಳು ಖುದ್ದು ಪರಿಶೀಲಿಸಿ ಖಚಿತಪಡಿಸಿಕೊಳ್ಳಲು ಸೂಚಿಸಿದೆ.

ಈ ಬಗ್ಗೆ ನಿರ್ಲಕ್ಷತೆಯಿಂದಾಗಿ ಯಾವುದೇ ಅವಘಡಗಳು ಸಂಭವಿಸಿದಲ್ಲಿ ಆಯಾ ಶಾಲೆಯ ಮುಖ್ಯ ಗುರುಗಳು ಹಾಗೂ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನೇ ನೇರ

3ನೇ ಪುಟಕ್ಕೆ

## ರಾಯಚೂರು ಉತ್ಸವದ ಜ್ಯೋತಿ ರಥಯಾತ್ರೆಗೆ ವಿದ್ಯುಕ್ತ ಚಾಲನೆ

ರಾಯಚೂರು ಫೆ.01-

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026ರ ಅಂಗವಾಗಿ ಜಿಲ್ಲಾಡಳಿತ ರೂಪಿಸಿರುವ ಜ್ಯೋತಿ ರಥಯಾತ್ರೆಗೆ ಫೆಬ್ರವರಿ 01ರಂದು ಚಾಲನೆ ಸಿಕ್ಕಿತು.

ನಗರದ ಐತಿಹಾಸಿಕ ಕರ್ನಾಟಕ ಸಂಘದ ಆವರಣದಿಂದ ರಥಯಾತ್ರೆ ಆರಂಭಗೊಂಡಿತು.

ರಥಯಾತ್ರೆ ಚಾಲನೆ ಹಿನ್ನೆಲೆಯಲ್ಲಿ ಕರ್ನಾಟಕ ಸಂಘದ ಆವರಣದಲ್ಲಿ ಬೆಳಗ್ಗೆ ಹಬ್ಬದ ಸಂಭ್ರಮ ಕಂಡು ಬಂದಿತು.

ಹೂವು, ತಳಿರು ತೋರಣಗಳಿಂದ ಶೃಂಗರಿಸಿದ್ದ ರಥವು ಗಮನ ಸೆಳೆಯಿತು.

ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಒಂದೇ ಬಣ್ಣದ ಸೀರೆ ಧರಿಸಿ ಆಗಮಿಸಿ ಕಾರ್ಯಕ್ರಮದ ಕಳೆ ಹೆಚ್ಚಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹಮ್ಮಿಕೊಂಡಿದ್ದ ಈ ರಥಯಾತ್ರೆಗೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು.

ಜಿಲ್ಲಾಡಳಿತದ ಸೂಚನೆ ಹಿನ್ನೆಲೆ, ರಜೆ ದಿನವಾದ ಭಾನುವಾರವೂ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ತಮ್ಮ ತಮ್ಮ ಕಚೇರಿಯ ಸಿಬ್ಬಂದಿಯೊಂದಿಗೆ ಆಗಮಿಸಿದ್ದರು.



ಜ್ಯೋತಿ ರಥಯಾತ್ರೆ ಕಾರ್ಯಕ್ರಮದಲ್ಲಿ ಶಾಲಾ-ಕಾಲೇಜಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥಯಾತ್ರೆಯನ್ನು ಯಶಸ್ವಿಗೊಳಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಜಾಥಾ: ನಗರದ ಬಂಗಾರ ಬಜಾರ್, ಸದರ್ ಬಜಾರ್, ಹಳೆ ನಗರಸಭೆ ಕಚೇರಿ ಮುಂಭಾಗ, ಕೇಂದ್ರ ಬಸ್ ನಿಲ್ದಾಣ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಬಸವೇಶ್ವರ ವೃತ್ತದ ಮೂಲಕ ಮಾನವಿಯತ್ತ ಹೊರಟಿತು.

ಈ ಜ್ಯೋತಿ ರಥಯಾತ್ರೆಯು ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಕವಿತಾಳ, ದೇವದುರ್ಗ, ಗಬ್ಬೂರ, ಅರಕೇರಾ, ಸಿರವಾರ ಸೇರಿದಂತೆ ಫೆ.5ರವರೆಗೆ ಜಿಲ್ಲೆಯಾದ್ಯಂತ ಬೇರೆ ಕಡೆಗಳಲ್ಲಿ ಸಂಚರಿಸಲಿದೆ.


ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಸಂತೋಷ ರಾಣಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು, ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಜಯಪ್ರಕಾಶ್ ಚವ್ಹಾಣ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ಆರ್. ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ರಾಯಚೂರು ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

ಮುಖಂಡರಾದ ರವಿ ಭೋಸರಾಜು, ಜಯವಂತರಾವ್ ಪತಂಗೆ, ಕೆ.ಶಾಂತಪ್ಪ, ರವಿ ಜಲ್ದಾರ್ ಸೇರಿದಂತೆ ವಿವಿಧ ದಿನಾಚರಣೆಗಳ ಆಚರಣಾ ಸಮಿತಿಯ ಸದಸ್ಯರು ಕೂಡ ಹಾಜರಿದ್ದರು.

## ತಾಲೂಕಿನ ಅತ್ತನೂರು, ನವಲಕಲ್ ಗ್ರಾ.ಪಂಗೆ ಜಿ.ಪಂ ಸಿಇಓ ಭೇಟಿ. ತಾ.ಪಂ ಇಓ ಅಸ್ವಸ್ಥ - ಆಸ್ಪತ್ರೆಗೆ ದಾಖಲು. ಕಛೇರಿಗೆ ಸಿಬ್ಬಂದಿಗಳು ಸಮಯಕ್ಕೆ ಆಗಮಿಸಬೇಕು - ಸಿಇಓ.

ಸಿರವಾರ.ಫೆ.1-

ಪಟ್ಟಣದಲ್ಲಿ ತಾಲೂಕ ಪಂಚಾಯತಿಗೆ ಜಿಲ್ಲಾ ಪಂಚಾಯತಿ ಸಿಇಓ ಈಶ್ವರ ಕುಮಾರ ಕಾಂದೂ ದಿಢೀರ್ ಭೇಟಿ ನೀಡಿದರು. ಸಿಇಓ ಅವರನ್ನ ಕಂಡ ಸಿಬ್ಬಂದಿ ವರ್ಗ ಕಕ್ಕಾಬಿಕ್ಕಿಯಾದರು, ಕಚೇರಿಗೆ ತಡವಾಗಿ ಬಂದ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಶಶಿಧರಸ್ವಾಮಿಗೆ ಜಿ.ಪಂ. ಸಿಇಓ ತರಾಟೆಗೆ ತೆಗೆದುಕೊಂಡರು, ಕಚೇರಿಯ ಸಮಸ್ಯೆ, ದಾಖಲೆಗಳನ್ನು ಕೇಳಿದ ನಂತರ ಇಓ ಶಶಿಧರಸ್ವಾಮಿ ಕಕ್ಕಾಬಿಕ್ಕಿಯಾಗಿ ತಡಕಾಡಿದರು. ಆರೋಗ್ಯದಲ್ಲಿ ಏರುಪೇರು, ಎದೆಯ ನೋವು ಕಾಣಿಸಿಕೊಂಡು, ಅಸ್ವಸ್ಥರಾದರು, ಕೂಡಲೇ ಅರನ್ನು ಆಸ್ಪತ್ರೆಗೆ ಕಳಿಸಿದ ಘಟನೆ ಜರುಗಿತು. ನಂತರ ತಾಲೂಕಿನ ನವಲಕಲ್ ಹಾಗೂ ಅತ್ತನೂರು ಗ್ರಾಮ ಪಂಚಾಯತಿಗೆ ಈಶ್ವರ್ ಕಾಂದೂ ರವರು ಬೇಟಿ ನೀಡಿದ್ದರು.



ತಾಲೂಕ ಪಂಚಾಯತಿಯಲ್ಲಿ ಅನಧಿಕೃತವಾಗಿ ಕಚೇರಿಗೆ ಗೈರು ಹಾಜರಾಗಿರುವವರಿಗೆ ನೋಟೀಸ್ ನೀಡುವಂತೆ ಯೋಜನಾಧಿಕಾರಿಗಳಿಗೆ ಸೂಚಿಸಿದರು. ನಂತರ ದಾಖಲೆಗಳನ್ನು ಪರಿಶೀಲನೆ ಮಾಡಿದರು. ಕಚೇರಿಯಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಕುಡಿಯುವ ನೀರು, ಶೌಚಾಲಯ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಒದಗಿಸಲು ನಿರ್ದೇಶನ ನೀಡಿದರು. ಬಾಡಿಗೆ ಕಟ್ಟಡ ಆಗಿರುವದರಿಂದ ಕೆಲ ಸಮಸ್ಯೆಗಳು ಇದ್ದು, ಅವುಗಳನ್ನು ಸಕಾಲಕ್ಕೆ ಪರಿಹರಿಸಬೇಕು. ನೂತನ ಕಚೇರಿಯ ಕಟ್ಟಡ ನಿರ್ಮಾಣಕ್ಕೆ ಕೆಲ ಕಡೆ ಸ್ಥಳ ಗುರುತಿಸುವ ಕಾರ್ಯ ನಡೆಯುತ್ತಿದೆ ಎಂದರು. ಪ್ರತಿ ನಿತ್ಯ ಕಚೇರಿ ಸಮಯಕ್ಕೆ ಎಲ್ಲ ಸಿಬ್ಬಂದಿಗಳು ಹಾಜರಾಗಿ ನಿಮ್ಮ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.

ಜನರ ಸಮಸ್ಯೆ ಆಲಿಸಿದ ಸಿಇಓ: ತಾಲೂಕ ಪಂಚಾಯತಿ ಕಚೇರಿಯಲ್ಲಿ ಸಾರ್ವಜನಿಕರು ಆಗಮಿಸಿದ್ದರೆ ಸೌಲಭ್ಯಗಳು ಕೊರತೆಯಿದ್ದು, ಅವುಗಳನ್ನು ಪರಿಹರಿಸುವಂತೆ ಜನರು ದೂರು ನೀಡಿದರು.

ನವಲಕಲ್ ಗ್ರಾ.ಪಂಗೆ ಭೇಟಿ: ನವಲಕಲ್ ಗ್ರಾಮ ಪಂಚಾಯತಿಗೆ ಆಗಮಿಸಿ ಪಂಚಾಯತಿ ಮುಂದುಗಡೆ ವಿಶಾಲವಾದ

3ನೇ ಪುಟಕ್ಕೆ

### ಮಡಿವಾಳ ಮಾಚಿದೇವ ಜಯಂತಿ

## ಕಾಯಕದ ಜೊತೆಗೆ ಶಿಕ್ಷಣ ಪಡೆಯಬೇಕು - ಚುಕ್ಕಿ ಸೂಗಪ್ಪ ಸಾಹುಕಾರ



ಸಿರವಾರ.ಫೆ.01-

ಕ್ರಾಂತಿಯೋಗಿ ಬಸವಣ್ಣ ನೇತೃತ್ವದಲ್ಲಿ ಶರಣರ ಆಂದೋಲನ ಪ್ರಾರಂಭವಾಗಿತ್ತು. ಬಸವಣ್ಣನವರ ಭಕ್ತಿ, ಕಾಯಕ ತತ್ವ, ದಾಸೋಹ, ಗುರುಲಿಂಗ ಮತ್ತು ಜಂಗಮ ಸೇವೆಗಳು ಎಲ್ಲ ಕಡೆಗೂ ಪ್ರಖ್ಯಾತವಾಗಿದ್ದವು. ಈ ವಿಚಾರ ತಿಳಿದು ಮಾಚಯ್ಯ, ಕಲಿದೇವರ ಗುರುಗಳ ಅಪ್ಪಣೆ ಪಡೆದು ಕಲ್ಯಾಣದೆಡೆಗೆ ಸಾಗಿದರು. ಕಲ್ಯಾಣಕ್ಕೆ ಬಂದ ಮೇಲೆ ಮಾಚಿದೇವ ಕಾಯಕವನ್ನು ಮುಂದುವರಿಸಿದರು ಅಂತಹ ಮಾಹನ್ ವ್ಯಕ್ತಿಯ ಸಮಾಜಯದವರಾದ ತಾವು ಕಾಯಕದ

3ನೇ ಪುಟಕ್ಕೆ

# ಕೇಂದ್ರ ಬಜೆಟ್ 2026: ತೆಂಗು, ಶ್ರೀಗಂಧ, ಗೋಡಂಬಿ, ಕೋಕೋ ಬೆಳೆಗೆ ಉತ್ತೇಜನ, ಕೃಷಿ ಆದಾಯ ವೃದ್ಧಿಗೆ ಬಲ




ನವದೆಹಲಿ,ಫೆ.01-

ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಮತ್ತು ಸಬ್ ಕಾ ಪ್ರಯಾಸ್ ನಮ್ಮ 3ನೇ ಕಾರ್ಯದ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದಿರುವ ಭಾರತ ಸರ್ಕಾರದ 2026ರ ಕೇಂದ್ರ ಬಜೆಟ್‌ನಲ್ಲಿ ಸಮಗ್ರ ಮತ್ತು ಅಂತರ್ಗತ ಬೆಳವಣಿಗೆಗೆ ಹೆಚ್ಚಿನ ಒತ್ತು ನೀಡಿದೆ. ದೇಶದ ಆರ್ಥಿಕತೆಯ ಬೆನ್ನೆಲುಬಾದ ರೈತರು ಮತ್ತು ನವೀನ ಕೃಷಿ ಪದ್ಧತಿಗಳಿಗೆ ಉತ್ತೇಜನ ನೀಡುವ ಮೂಲಕ 'ವಿಕಸಿತ ಭಾರತ'ದ ಗುರಿಯನ್ನು ತಲುಪುವುದು ಈ ಬಜೆಟ್‌ನ ಆಶಯವಾಗಿದೆ. ವಿಶೇಷವಾಗಿ ಈ ಬಾರಿಯ ಬಜೆಟ್‌ನಲ್ಲಿ ಕೃಷಿ ವಲಯವನ್ನು ಕೇವಲ ಆಹಾರೋತ್ಪನ್ನ ಕೇಂದ್ರವಾಗಿ ನೋಡದೆ, ಆದಾಯ ತರುವ ಲಾಭದಾಯಕ ಉದ್ಯಮವನ್ನಾಗಿ ಪರಿವರ್ತಿಸಲು ಹಲವು ಮಹತ್ವದ ಘೋಷಣೆಗಳನ್ನು ಮಾಡಲಾಗಿದೆ.

2026 ಕೇಂದ್ರ ಬಜೆಟ್ ಘೋಷಣೆಗಳು ಹೀಗಿವೆ:

ಶ್ರೀಗಂಧದ ಕೃಷಿ: ಶ್ರೀಗಂಧವು ಭಾರತದ ಸಾಮಾಜಿಕ ಮತ್ತು ಸಾಂಸ್ಕೃತಿಕ ಪರಂಪರೆಯೊಂದಿಗೆ ನಿಕಟ ಸಂಬಂಧ ಹೊಂದಿದೆ. ಭಾರತೀಯ ಶ್ರೀಗಂಧದ ಪರಿಸರ ವ್ಯವಸ್ಥೆಯ ವೈಭವವನ್ನು ಪುನಃಸ್ಥಾಪಿಸಲು ಕೇಂದ್ರೀಕೃತ ಕೃಷಿ ಮತ್ತು ಕೊಯ್ಲಿನ ನಂತರದ ಸಂಸ್ಕರಣೆಯನ್ನು ಉತ್ತೇಜಿಸಲು ಕೇಂದ್ರ ಸರ್ಕಾರ ರಾಜ್ಯ ಸರ್ಕಾರಗಳೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವುದು.

ಹಳೆಯ, ಕಡಿಮೆ ಇಳುವರಿ ನೀಡುವ ತೋಟಗಳನ್ನು ಪುನರುಜ್ಜೀವನಗೊಳಿಸಲು ಮತ್ತು ವಾಲ್ನಟ್ಸ್, ಬಾದಾಮಿ ಮತ್ತು ಪೈನ್ ಬೀಜಗಳ ಹೆಚ್ಚಿನ ಸಾಂದ್ರತೆಯ ಕೃಷಿಯನ್ನು ವಿಸ್ತರಿಸಲು, ರೈತರ ಆದಾಯವನ್ನು ಹೆಚ್ಚಿಸಲು ಮತ್ತು ಯುವಕರನ್ನು ತೊಡಗಿಸಿಕೊಳ್ಳುವ ಮೂಲಕ ಮೌಲ್ಯವರ್ಧನೆಯನ್ನು ತರುವಲ್ಲಿ ಮೀಸಲಾದ ಕಾರ್ಯಕ್ರಮವನ್ನು ಬೆಂಬಲಿಸುವುದು.

ಜಾಗತಿಕ ಬ್ಯಾಂಡ್‌ಗಳಾಗಿ ಗೋಡಂಬಿ, ಕೋಕೋ: 2030ರ ವೇಳೆಗೆ ಕಚ್ಚಾ ಗೋಡಂಬಿ, ಕೋಕೋ ಉತ್ಪಾದನೆ ಮತ್ತು ಸಂಸ್ಕರಣೆಯಲ್ಲಿ ಭಾರತವನ್ನು ಸ್ವಾವಲಂಬಿಯನ್ನಾಗಿ ಮಾಡಲು, ರಫ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಮತ್ತು ಭಾರತೀಯ ಗೋಡಂಬಿ, ಭಾರತೀಯ ಕೋಕೋವನ್ನು ಪ್ರೀಮಿಯಂ ಜಾಗತಿಕ ಬ್ಯಾಂಡ್‌ಗಳಾಗಿ ಪರಿವರ್ತಿಸಲು ಗೋಡಂಬಿ ಮತ್ತು ಕೋಕೋಗೆ ಮೀಸಲಾದ ಕಾರ್ಯಕ್ರಮಗಳನ್ನು ಪ್ರಸ್ತಾಪಿಸಲಾಗಿದೆ.

ತೆಂಗಿನಕಾಯಿಗೆ ಉತ್ತೇಜನ: ಭಾರತವು ವಿಶ್ವದ ಅತಿದೊಡ್ಡ ತೆಂಗಿನಕಾಯಿ ಉತ್ಪಾದಕ ರಾಷ್ಟ್ರವಾಗಿದೆ. ಸುಮಾರು 10 ಮಿಲಿಯನ್ ರೈತರು ಸೇರಿದಂತೆ ಸುಮಾರು 30 ಮಿಲಿಯನ್ ಜನರು ತಮ್ಮ ಜೀವನೋಪಾಯಕ್ಕಾಗಿ ತೆಂಗಿನಕಾಯಿಯನ್ನು ಅವಲಂಬಿಸಿದ್ದಾರೆ. ತೆಂಗಿನಕಾಯಿ ಉತ್ಪಾದನೆಯಲ್ಲಿ ಸ್ಪರ್ಧಾತ್ಮಕತೆಯನ್ನು ಮತ್ತಷ್ಟು ಹೆಚ್ಚಿಸಲು, ಹಳೆಯ ಮತ್ತು ಉತ್ಪಾದಕವಲ್ಲದ ಮರಗಳನ್ನು ಹೊಸ ಸಸಿಗಳು/ಸಸ್ಯಗಳು/ಪ್ರಭೇದಗಳೊಂದಿಗೆ ಬದಲಾಯಿಸುವುದು ಸೇರಿದಂತೆ ವಿವಿಧ ಮಧ್ಯಸ್ಥಿಕೆಗಳ ಮೂಲಕ ಉತ್ಪಾದನೆಯನ್ನು ಹೆಚ್ಚಿಸಲು ತೆಂಗಿನಕಾಯಿ ಉತ್ತೇಜನ ಯೋಜನೆ ಪ್ರಸ್ತಾಪಿಸಲಾಗಿದೆ.

ರೈತರ ಆದಾಯ ಹೆಚ್ಚಳ:

ಮೀನುಗಾರಿಕೆ: 500 ಜಲಾಶಯಗಳು ಮತ್ತು ಅಮೃತ ಸರೋವರಗಳ ಸಮಗ್ರ ಅಭಿವೃದ್ಧಿ, ಕರಾವಳಿ ಪ್ರದೇಶಗಳಲ್ಲಿ ಮೀನುಗಾರಿಕೆ ಮೌಲ್ಯ ಸರಪಳಿಯನ್ನು ಬಲಪಡಿಸುವುದು ಮತ್ತು ಮೀನು ಕೃಷಿಕರ ಉತ್ಪಾದಕ ಸಂಸ್ಥೆಗಳೊಂದಿಗೆ ನವೋದ್ಯಮಗಳು ಮತ್ತು ಮಹಿಳಾ ನೇತೃತ್ವದ ಗುಂಪುಗಳನ್ನು ಒಳಗೊಂಡ ಮಾರುಕಟ್ಟೆ ಸಂಪರ್ಕವನ್ನು ಸಕ್ರಿಯಗೊಳಿಸುವುದು.

ಪಶುಸಂಗೋಪನೆ: ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಲ್ಲಿ ಗುಣಮಟ್ಟದ ಉದ್ಯೋಗಾವಕಾಶಗಳನ್ನು ಒದಗಿಸಲು, ಉದ್ಯಮಶೀಲತಾ ಅಭಿವೃದ್ಧಿಯಲ್ಲಿ ಪಶುಸಂಗೋಪನಾ ವಲಯವನ್ನು ಈ ಕೆಳಗಿನವುಗಳ ಮೂಲಕ ಕೇಂದ್ರ ಸರ್ಕಾರ ಬೆಂಬಲಿಸಲಿದೆ.

ಹೆಚ್ಚಿನ ಮೌಲ್ಯದ ಕೃಷಿ: ಕೃಷಿ ಉತ್ಪನ್ನಗಳನ್ನು ವೈವಿಧ್ಯಗೊಳಿಸಲು, ಉತ್ಪಾದಕತೆಯನ್ನು ಹೆಚ್ಚಿಸಲು, ರೈತರ ಆದಾಯವನ್ನು ಹೆಚ್ಚಿಸಲು ಮತ್ತು ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲು, ಕರಾವಳಿ ಪ್ರದೇಶಗಳಲ್ಲಿ ತೆಂಗಿನಕಾಯಿ, ಶ್ರೀಗಂಧ, ಕೋಕೋ ಮತ್ತು ಗೋಡಂಬಿಯಂತಹ ಹೆಚ್ಚಿನ ಮೌಲ್ಯದ ಬೆಳೆಗಳನ್ನು ನಾವು ಬೆಂಬಲಿಸುತ್ತೇವೆ. ಈಶಾನ್ಯದಲ್ಲಿ ಅಗರ್ ಮರಗಳು ಮತ್ತು ನಮ್ಮ ಗುಡ್ಡಗಾಡು ಪ್ರದೇಶಗಳಲ್ಲಿ ಬಾದಾಮಿ, ವಾಲ್ನಟ್ ಮತ್ತು ಪೈನ್‌ನಂತಹ ಬೀಜಗಳನ್ನು ಸಹ ಬೆಂಬಲಿಸಲಾಗುತ್ತದೆ ಎಂದು ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿದೆ.

ಭಾರತ್-ವಿಸ್ತಾರ್ ವ್ಯವಸ್ಥೆ: ಭಾರತ್-ವಿಸ್ತಾರ್ ಪ್ರಾರಂಭದ ಪ್ರಸ್ತಾಪವನ್ನು ವಿತ್ತ ಸಚಿವೆ ಮಾಡಿದ್ದಾರೆ. ಇದು ಬಹುಭಾಷಾ ಸಾಧನವಾಗಿದ್ದು, ಇದು ಅಗ್ರಿಸ್ಟಾಕ್ ಪೋರ್ಟಲ್‌ಗಳು ಮತ್ತು ಕೃಷಿ ಪದ್ಧತಿಗಳ ಕುರಿತು ಪ್ಯಾಕೇಜ್ ಅನ್ನು ವ್ಯವಸ್ಥೆಗಳೊಂದಿಗೆ ಸಂಯೋಜಿಸುತ್ತದೆ. ಇದು ಕೃಷಿ ಉತ್ಪಾದಕತೆಯನ್ನು ಹೆಚ್ಚಿಸುತ್ತದೆ, ರೈತರಿಗೆ ಉತ್ತಮ ನಿರ್ಧಾರಗಳನ್ನು ಸಕ್ರಿಯಗೊಳಿಸುತ್ತದೆ ಮತ್ತು ಕಸ್ಟಮೈಸ್ ಮಾಡಿದ ಸಲಹಾ ಬೆಂಬಲವನ್ನು ಒದಗಿಸುವ ಮೂಲಕ ಅಪಾಯವನ್ನು ಕಡಿಮೆ ಮಾಡುತ್ತದೆ.

# ಬ್ರಿಮ್ಸ್ ಪುನರುಜ್ಜೀವನಕ್ಕೆ ಕ್ರಮ



ಬೀದರ್,ಫೆ.01-

ಹಲವಾರು ಅವ್ಯವಸ್ಥೆಗಳ ದೂರು ಹಿನ್ನೆಲೆಯಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಆರ್.ಪಾಟೀಲ ಅವರಿಂದು ಬ್ರಿಮ್ಸ್ ಸಭಾಂಗಣದಲ್ಲಿ ಬ್ರಿಮ್ಸ್ ವೈದ್ಯಾಧಿಕಾರಿಗಳು ಹಾಗೂ ಆಡಳಿತ ಅಧಿಕಾರಿಗಳ ಸಭೆ ಜರುಗಿಸಿ ಸಮಸ್ಯೆಗ ಳನ್ನು ಆಲಿಸಿದರು.

ವೈದ್ಯಕೀಯ ವಿಜ್ಞಾನದ ಎಲ್ಲ ವಿಭಾಗದ ಮುಖ್ಯಸ್ಥರು ತಮ್ಮ ಅಗತ್ಯತೆಗಳನ್ನು ಹಾಗೂ ಅನುದಾನದ ಬೇಡಿಕೆಯನ್ನು ಪಟ್ಟಿ ಮಾಡಿ ಶೀಘ್ರವೇ ಸಲ್ಲಿಸುವಂತೆ ಸಚಿವರು ತಿಳಿಸಿದರು. ಮುಂಬರುವ ಬಜೆಟ್ ಅಧಿವೇಶನದಲ್ಲಿ ಬ್ರಿಮ್ಸನ್ ಒಟ್ಟಾರೆ ಅಭಿವೃದ್ಧಿಗೆ ವಿಶೇಷ ಅನುದಾನಕ್ಕಾಗಿ ಪ್ರಸ್ತಾವನೆ ಮಂಡಿಸಲಾಗುವುದೆಂದು ತಿಳಿಸಿದರು.

ತುರ್ತು ಚಿಕಿತ್ಸೆ ಆಪರೇಷನ್ ಥಿಯೇಟರ್‌ನ್ನು ತಕ್ಷಣವೇ ರಿಪೇರಿ ಮಾಡುವಂತೆ, ನೆಲಮಹಡಿಯಲ್ಲಿ ನೀರು ಸೋರಿಕೆ ಹಾಗೂ ಸಂಗ್ರಹಕ್ಕಾಗಿ ಕೈಗೊಂಡ ಕಾಮಗಾರಿಯನ್ನು ತಕ್ಷಣವೇ ರಿಪೇರಿ ಮಾಡುವಂತೆ ಪಿಡಬ್ಲ್ಯೂಡಿ ಕಾರ್ಯನಿರ್ವಾಹಕ ಅಭಿಯಂತರರಿಗೆ ತಿಳಿಸಿದರು.

ತಾತ್ಕಾಲಿಕ ಹಾಗೂ ಗುತ್ತಿಗೆ ಸಿಬ್ಬಂದಿ ನೌಕರರ ಸಂಬಳವನ್ನು ಡಿಸೆಂಬರ ತನಕ ಪಾವತಿಸಲಾಗಿದೆ ಹಾಗೂ ಉಳಿದ ಅನುದಾನವನ್ನು ಸಹ ಪಾವತಿಗೆ ಕ್ರಮ ಕೈಗೊಳ್ಳಲಾಗುವುದು. ಹೃದಯ ಸಂಬಂಧಿತ ಚಿಕಿತ್ಸೆಗಳಿಗೆ ಗುಲಬರ್ಗಾದ ಜಯದೇವ ಆಸ್ಪತ್ರೆ ಜೊತೆ ಒಪ್ಪಂದ ಮಾಡಿಕೊಳ್ಳಲಾಗುತ್ತಿದೆ ಹಾಗೂ ಬ್ರಿಮ್ಸ್‌ನ ಕ್ಯಾತ್‌ಲ್ಯಾಬ್ ಸಹ ಆರಂಭಿಸಲಾಗುವುದೆಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಬ್ರಿಮ್ಸ್ ನಿರ್ದೇಶಕ ಶಿವಕುಮಾರ ಶೆಟಕಾರ ಸೇರಿದಂತೆ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರ ನೇಮಕಾತಿಗೆ ನೇರ ಸಂದರ್ಶನ ಫೆ.11ಕ್ಕೆ

ಬೀದರ, ಫೆ.01-

ಬೀದರ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ಸ್ನಾತಕೋತ್ತರ ವಿಭಾಗ ಗಣಿತ ವಿಷಯದ ಹೆಚ್ಚುವರಿ ಬೋಧನಾ ಕಾರ್ಯದ ನಿರ್ವಹಣೆಗಾಗಿ ಯುಜಿಸಿ ನಿಯಮಾವಳಿ ಅನ್ವಯ ಪಿ.ಎಚ.ಡಿ/ನೆಟ್/ಸೆಟ್ ವಿದ್ಯಾರ್ಹತೆ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಮಾತ್ರ ಪೂರ್ಣಕಾಲಿಕ/ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು 2025-26ನೇ ಶೈಕ್ಷಣಿಕ ಸಾಲಿಗೆ ಪಡೆಯಲು ನೇರ ಸಂದರ್ಶನಕ್ಕೆ (ವಾಕ್-ಇನ್-ಇಂಟವ್ರ್ಯೂವ್) ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಫೆ.11 ರಂದು ಬೆಳಿಗ್ಗೆ 10 ಗಂಟೆಗೆ ಬೀದರ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನೇರ ಸಂದರ್ಶನ (ವಾಕ್-ಇನ್-ಇಂಟರವ್ಯೂವ್) ಏರ್ಪಡಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಮೂಲ ಹಾಗೂ ತಮ್ಮ ಅಗತ್ಯ ಶೈಕ್ಷಣಿಕ ದಾಖಲಾತಿಗಳು ಮತ್ತು ಸೇವಾ ದಾಖಲಾತಿಗಳೊಂದಿಗೆ ಒಂದು ದೃಢೀಕೃತ ಪ್ರತಿಯೊಂದಿಗೆ ಹಾಜರಾಗಬೇಕೆಂದು ಬೀದರ ವಿ.ವಿ.ಯ ಕುಲಸಚಿವರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಎನ್‌ಆರ್‌ಎಲ್‌ಎಂ ಯೋಜನೆಗಳ ಪರಿಶೀಲನಾ ಸಭೆ: ವಿವಿಧ ಬ್ರಾಂಡ್‌ಗಳ ಪ್ರದರ್ಶನ

# ಸ್ವ-ಸಹಾಯ ಸಂಘದ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಕುರೇರ್

ಬಾಗಲಕೋಟೆ ,ಫೆ.01-

ಜಿಲ್ಲೆಯ ಸ್ವ-ಸಹಾಯ ಸಂಘಗಳ ಸದಸ್ಯರುಗಳು ಉತ್ಪಾದಿಸಿದ ವಿವಿಧ ಉತ್ಪನ್ನಗಳ ಪ್ಯಾಕೇಜಿಂಗ್ ಮತ್ತು ಬ್ರಾಂಡಿಂಗ್‌ಗಳನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವೀಕ್ಷಣೆ ಮಾಡಿ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿ.ಪಂ. ನೂತನ ಸಭಾ ಭವನದಲ್ಲಿ ಇತ್ತೀಚೆಗೆ ಹಮ್ಮಿಕೊಂಡ ವಿವಿಧ ಸ್ವ-ಸಹಾಯ ಸಂಘದ ಸದಸ್ಯರುಗಳು ಉತ್ಪಾದಿಸಿದ ಉತ್ಪನ್ನಗಳ ಪ್ರದರ್ಶನವನ್ನು ವೀಕ್ಷಣೆ ಮಾಡಿ, ಮಹಿಳಾ ಸ್ವ-ಸಹಾಯ ಸಂಘಗಳು ಸ್ಥಳೀಯ ಸಂಪನ್ಮೂಲಗಳನ್ನು ಬಳಸಿ ಗುಣಮಟ್ಟದ ಹಾಗೂ ಮಾರುಕಟ್ಟೆಗೆ ಹೊಂದುವ ಉತ್ಪನ್ನಗಳನ್ನು ತಯಾರಿಸುತ್ತಿರುವುದು ಶ್ಲಾಘನೆ ವ್ಯಕ್ತಪಡಿಸಿದರು.

ಇಂತಹ ಉತ್ಪಾದನಾ ಚಟುವಟಿಕೆಗಳು ಗ್ರಾಮೀಣ ಮಹಿಳೆಯರ ಆರ್ಥಿಕ ಸ್ವಾವಲಂಬನೆಯನ್ನು ಹೆಚ್ಚಿಸುವುದರ ಜೊತೆಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತವೆ.ಮುಂದಿನ ದಿನಗಳಲ್ಲಿ ಉತ್ಪನ್ನಗಳ ಮಾರುಕಟ್ಟೆ ಸಂಪರ್ಕ, ಪ್ಯಾಕೇಜಿಂಗ್ ಮತ್ತು ಬ್ರಾಂಡಿಂಗ್‌ಗೆ ಅಗತ್ಯ ಸಹಕಾರ ನೀಡಲಾಗುವುದೆಂದು ಭರವಸೆ ನೀಡುವುದರ ಜೊತೆಗೆ ನವೀನ ಮಾದರಿಯ ಬ್ರಾಂಡ್ ಉತ್ಪನ್ನಗಳ ಪ್ರಯತ್ನಗಳನ್ನು ಮುಂದು ವರಿಸುವಂತೆ ಮಾರ್ಗದರ್ಶನ ನೀಡಿದರು.

ಉತ್ಪನ್ನಗಳ ಆಕರ್ಷಕ ಬ್ರಾಂಡಿಂಗ್ ಮತ್ತು ಗುಣಮಟ್ಟದ ಲೇಬಲಿಂಗ್ ಹಾಕುವ ಮೂಲಕ ಮಾರುಕಟ್ಟೆಯಲ್ಲಿ ಉತ್ತಮ ಸ್ಥಾನವನ್ನು ಪಡೆಯಬಹುದಾಗಿದೆ. ಎನ್.ಆರ್.ಎಲ್.ಎಂನ ಎಲ್ಲ ಸಿಬ್ಬಂದಿಗಳು ಹಾಗೂ ಸ್ವ-ಸಹಾಯಕ ಸಂಘಗಳ ಸದಸ್ಯರುಗಳು ಉತ್ತಮ ಸಮನ್ವಯದೊಂದಿಗೆ ಕೆಲಸ ಮಾಡುತ್ತಿ ರುವುದಕ್ಕೆ ತೃಪ್ತಿ ಹಾಗೂ ಪ್ರಶಂಸೆ ವ್ಯಕ್ತಪಡಿಸಿದರು. ಎನ್. ಆರ್. ಎಲ್.ಎಂ ಯೋಜನೆಯ ಯಶಸ್ಸಿಗೆ ಮತ್ತಷ್ಟು ಬಲ ನೀಡುವಂತಾಗಿದ್ದು, ಮುಂದಿನ ದಿನಗಳಲ್ಲಿ ಮಹಿಳಾ ಸ್ವ-ಉದ್ಯೋಗ ಮತ್ತು ಆದಾಯ ವೃದ್ದಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ನಂತರ ಪರಿಶೀಲನಾ ಸಭೆಯಲ್ಲಿ ಎನ್.ಆರ್.ಎಲ್.ಎಂ ಕಾರ್ಯಕ್ರಮಗಳ ಅನುಷ್ಠಾನ ಸ್ಥಿತಿ, ಸಾಧನೆಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ವಿವರವಾದ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ವಿವಿಧ ಬ್ರಾಂಡ್ ಹಾಗೂ ಬ್ಯಾಗ್‌ಗಳನ್ನು ಪ್ರದರ್ಶನ ಮಾಡಲಾಯಿತು. ಸಭೆಯಲ್ಲಿ ಜಿ.ಪಂ ಸಹಾಯಕ ನಿರ್ದೇಶಕ ಎಸ್.ಎಂ. ಕಾಂಬಳೆ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ವಿವಿಧ ಸ್ವ-ಸಹಾಯ ಸಂಘದ ಸದಸ್ಯರುಗಳು ಉಪಸ್ಥಿತರಿದ್ದರು.

## ಬಳ್ಳಾರಿ: 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆಯ ಸಮರೋಪ

# ರಸ್ತೆ ಸಂಚಾರಿ ನಿಯಮಗಳನ್ನು ಪಾಲಿಸುವವರೇ ನಿಜವಾದ ಹೀರೋ

ಬಳ್ಳಾರಿ,ಫೆ.01-

ರಸ್ತೆ ಸಂಚಾರಿ ನಿಯಮಗಳನ್ನು ಪಾಲನೆ ಮಾಡುವ ಮೂಲಕ ವಾಹನ ಚಾಲನೆ ಮಾಡುವವರೇ ನಿಜವಾದ ಹೀರೋಗಳಾಗುತ್ತಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಕೆ.ಜಿ ಶಾಂತಿ ಅವರು ಹೇಳಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಸಾರಿಗೆ ಇಲಾಖೆ ಇವರ ಸಂಯುಕ್ತಾಶ್ರ ಯದಲ್ಲಿ ನಗರದ ಜಿಲ್ಲಾ ಪಂಚಾ ಯತ್ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 37 ನೇ ರಸ್ತೆ ಸುರಕ್ಷತಾ ಮಾಸಾಚರಣೆಯ ಸಮಾ ರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದಿನನಿತ್ಯ ಬಳಸುವ ರಸ್ತೆಯಲ್ಲಿ ಪ್ರತಿಯೊಬ್ಬರ ಜೀವನ ಅಡಗಿದ್ದು, ಜಾಗರೂಕರಾಗಿ ವಾಹನ ಚಲಾಯಿಸಬೇಕು. ರಸ್ತೆ ನಿಯಮ ಉಲ್ಲಂಘಿಸಿ, ಸಿಗ್ನಲ್ ಜಂಪ್ ಮಾಡಿ ಪೊಲೀಸರ ಕಣ್ಣು ತಪ್ಪಿಸಿ ಚಲಾಯಿಸುವುದು ಸಾಹಸವಲ್ಲ; ಬದಲಾಗಿ ನಿಯಮ ಪಾಲಿಸಿ ವಾಹನ ಚಲಾಯಿಸಿದರೆ ಮಾತ್ರ ಸುರಕ್ಷಿತರಾಗಿ ಮನೆಗೆ ಸೇರಬಹುದು ಎಂದರು.




18 ವರ್ಷದೊಳಗಿನ ಮಕ್ಕಳಿಗೆ ವಾಹನ ಚಲಾಯಿಸಲು ನೀಡಿದಲ್ಲಿ ಮಕ್ಕಳ ಪೋಷಕರ ವಿರುದ್ಧ ಪ್ರಕರಣ ಮತ್ತು 25,000 ಸಾವಿರ ದಂಡವಿದೆ. ಚಾಲನಾ ಪರವಾನಿಗೆ ಇಲ್ಲದೇ ವಾಹನ ಚಲಾಯಿಸುವಂತಿಲ್ಲ. ಈ ಕುರಿತು ಪ್ರತಿಯೊಬ್ಬರೂ ಎಚ್ಚರ ವಹಿಸಬೇಕು. 5 ಬಾರಿಗಿಂತ ಪ್ರಕರಣ ದಾಖಲಾದಲ್ಲಿ ಅಂತಹವರ ಚಾಲನಾ ಪರವಾನಿಗೆ ಶಾಶ್ವತವಾಗಿ ರದ್ದು ಪಡಿಸುವ ಕಾನೂನಿದೆ ಎಂದು ತಿಳಿಸಿದರು.

ರಸ್ತೆ ಅಪಘಾತಗಳು ಅಪಾಯಕಾರಿಯಾಗಿದ್ದು, ಸಾರ್ವಜನಿಕ ರಸ್ತೆಗಳಲ್ಲಿ ಸಂಚರಿಸುವ ಪ್ರತಿಯೊಬ್ಬರೂ ರಸ್ತೆ ನಿಯಮಗಳನ್ನು ಪಾಲಿಸಬೇಕು. ಸಾರ್ವಜನಿಕರಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಕುರಿತು ಅರಿವು ಮೂಡಿಸಲು ಜನವರಿ ಮಾಸಾ ದ್ಯಂತ ಜಿಲ್ಲೆಯಲ್ಲಿ ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮುಂದೆಯೂ ನಿರಂತರವಾಗಿ ಪಾಲಿಸಿದಲ್ಲಿ ಮಾತ್ರ ಈ ಮಾಸಾಚರಣೆಯು ಅರ್ಥ ಪೂರ್ಣವಾಗಲಿದೆ ಎಂದು ಹೇಳಿ ದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸುರಕ್ಷತೆಯು ಮೊದಲ ಆದ್ಯತೆಯಾಗಬೇಕು. ಅದು ರಸ್ತೆ ಸುರಕ್ಷತೆಯಾಗಿರಬೇಕು. ಬದಲಾವಣೆ ನಮ್ಮಿಂದ ಮಾತ್ರ ಸಾಧ್ಯವಾಗಿದ್ದು, ಪ್ರತಿಯೊಬ್ಬರೂ ರಸ್ತೆ ನಿಯಮಗಳನ್ನು ಪಾಲಿಸಬೇಕು ಎಂದರು.

ಆಡುಭಾಷೆಯಂತೆ ಅತಿವೇಗ-ತಿಥಿ ಬೇಗ ಎನ್ನುವ ಹಾಗೆ ಅತಿವೇಗದ ಚಾಲನೆ ನಮ್ಮ ಪ್ರಾಣಕ್ಕೆ ಕುತ್ತು ತರಲಿದ್ದು, ಇದನ್ನು ಮನದಲ್ಲಿಟ್ಟುಕೊಂಡು ಪ್ರತಿಯೊಬ್ಬರೂ ನಿಧಾನವಾಗಿ ಚಾಲನೆ ಮಾಡಬೇಕು. ಜೀವ ಮತ್ತು ಜೀವನ ಅಮೂಲ್ಯವಾಗಿದ್ದು, ಸಾರ್ವಜನಿಕ ರಸ್ತೆಗಳಲ್ಲಿ ಶಿಸ್ತು ಅಳವಡಿಸಿಕೊಂಡು ವಾಹನ ಚಲಾಯಿಸೋಣ ಎಂದು ತಿಳಿಸಿದರು.

ರಸ್ತೆ ಅಪಘಾತ ಸಂದರ್ಭದಲ್ಲಿ ತಪ್ಪದೇ ಸಹಾಯ ಹಸ್ತ ನೀಡಬೇಕು. ಅಂತಹವರನ್ನು ಪ್ರಥಮವಾಗಿ ಆಸ್ಪತ್ರೆಗೆ ಸೇರಿಸಬೇಕು.

ಆ ಸಂದ ರ್ಭದಲ್ಲಿ ಯಾವುದೇ ತಮ್ಮ ಮಾಹಿ ತಿಯನ್ನು ನೀಡುವುದು ಅಗತ್ಯವಿಲ್ಲ. ಆಸ್ಪತ್ರೆ ಮತ್ತು ಪೊಲೀಸ್ ಸಿಬ್ಬಂದಿ ಮಾಹಿತಿ ಪಡೆಯುವಂತಿಲ್ಲ. ದೇಶ ದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಈ ಕಾನೂನುನನ್ನು ಜಾರಿಗೊಳಿಸಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್ ಅವರು ಮಾತನಾಡಿ, ರಸ್ತೆ ಪಾದಾಚಾರಿಗಳು ಸಹ ಜಾಗ್ರತೆಯಿಂದ ರಸ್ತೆ ಸಂಚಾರ ನಿಮಯಗಳನ್ನು ಪಾಲಿಸಬೇಕಿದೆ. ಅವಘಡ ಯಾವ ರೀತಿಯಲ್ಲಾದರೂ ಸಂಭವಿಸಬಹುದಾಗಿದೆ. ರಸ್ತೆ ನಿಮಯ, ಸಂಚಾರಿ ಚಿಹ್ನೆಗಳನ್ನು ಅರಿ ತುಕೊಳ್ಳುವುದು ಅತ್ಯಗತ್ಯವಾಗಿದೆ. ವಾಹನ ಚಾಲನೆ ವೇಳೆ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಬೆಲ್ಟ್ ಕಟ್ಟಿ ಕೊಳ್ಳಬೇಕು. ಚಾಲನೆ ವೇಳೆ ಮೊಬೈಲ್ ಫೋನ್ ಬಳಸಬಾರದು. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು. ಮುಖ್ಯ ರಸ್ತೆ ಸಂಚಾರ ನಿಯಮಗಳನ್ನು ಕೈ ಸನ್ನೆಯ ಮೂಲಕ ಸಾರ್ವಜನಿಕರಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷತೆ ಕುರಿತಾದ ಭಿತ್ತಿಪತ್ರ ಅನಾವರಣ ಗೊಳಿಸಿದರು. ರಸ್ತೆ ಸುರಕ್ಷತೆ ಜಾಗೃತಿಯ ವಿಡಿಯೋ ತುಣು ಕುಗಳನ್ನು ಪ್ರದರ್ಶಿಸಲಾಯಿತು.

ಈ ವೇಳೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ, ಪ್ರಭಾರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ನಿಜಾಮುದ್ದೀನ್ ಶರೀಫ್, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ಅಧಿಕಾರಿಗಳು, ಸಂಚಾರಿ ಪೊಲೀಸ್ ಅಧಿಕಾರಿಗಳು ಹಾಗೂ ಆಟೋ, ಲಾರಿ ಸಂಘದ ಪದಾಧಿಕಾರಿಗಳು, ಚಾಲ ಕರು, ಸಾರ್ವಜನಿಕರು ಉಪಸ್ಥಿತರಿ ದ್ದರು.

# ಡಿ.ಎಂ.ಎಫ್ ಪ್ರಗತಿ ಪರಿಶೀಲನಾ ಸಭೆ: ಫೆ. 10 ರೊಳಗೆ ಕಾಮಗಾರಿ ಆರಂಭಿಸಿ -ಬಿ.ಫೌಜಿಯಾ ತರನುಮ್



ಕಲಬುರಗಿ,ಫೆ.01-

ಜಿಲ್ಲೆಯಾದ್ಯಾಂತ ಜಿಲ್ಲಾ ಖನಿಜ ನಿಧಿ ಅನುದಾನದಡಿ ಈಗಾಗಲೇ ಕ್ರಿಯಾ ಯೋಜನೆಯಲ್ಲಿ ಅನುಮೋದನೆಗೊಂಡ ಕಾಮಗಾಗಳನ್ನು ಇದೇ ಫೆಬ್ರವರಿ 10ರೊಳಗೆ ಆರಂಭಿಸುವಂತೆ ಅನುಷ್ಠಾನ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದರು.

ಶುಕ್ರವಾರ ಈ ಸಂಬಂಧ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಒಂದು ವೇಳೆ ನಿಗದಿತ ಅವಧಿಯಲ್ಲಿ ಕೆಲಸ ಕಾಮ ಗಾರಿಗಳು ಪ್ರಾರಂಭ ಮಾಡದಿದ್ದರೆ ಅಂತ ಕಾಮಗಾರಿಗಳನ್ನು ಕೈಬಿಟ್ಟು, ಉಳಿತಾಯದ ಅನುದಾನದಡಿ ಅವಶ್ಯವಿರುವ ಇತರೆ ಹೊಸ ಕಾಮ ಗಾರಿಗಳನ್ನು ಕೈಗೆತ್ತಿಕೊಳ್ಳಲಾಗು ವುದು. ಕಾಮಗಾರಿ ಆರಂಭಕ್ಕೆ ವಿಳಂಬ ಸಹಿಸುವುದಿಲ್ಲ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಇನ್ನು ಈಗಾಗಲೇ ಕ್ರಿಯಾ ಯೋಜನೆಯಡಿ ಅನುಮೋದನೆಗೊಂಡಿರುವ ಕಾಮಗಾರಿಗಳನ್ನು ಆರಂಭಕ್ಕೆ ಆಡಳಿತಾತ್ಮಕ ಅನುಮೋದನೆ ಪಡೆಯಲು 3 ದಿನದೊಳಗೆ ಈ ಕಚೇರಿಗೆ ಪ್ರಸ್ತಾವನೆ ಸಲ್ಲಿಸುವಂತೆ ಅನುಷ್ಠಾನ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಡಿ.ಸಿ.ಎಫ್ ಸುಮಿತ ಪಾಟೀಲ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪನಿರ್ದೇಶಕ ಸೋಮಶೇಖರ್ ಸೇರಿದಂತೆ ವಿವಿಧ ಇಲಾಖೆಯ ಅನುಷ್ಠಾನ ಏಜೆನ್ಸಿಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಧ್ವನಿ ಮತ್ತು ಬೆಳಕು ಕಾರ್ಯಕ್ರಮಕ್ಕೆ ಫೆ.4 ರಂದು ಕಲಾವಿದರ ಆಯ್ಕೆ

ವಿಜಯನಗರ ,ಫೆ.01-

ಕೇಂದ್ರ ಸಂವಹನ ಇಲಾಖೆಯ ಸಂಗೀತ ಮತ್ತು ನಾಟಕ ವಿಭಾಗ, ಪ್ರವಾಸೋದ್ಯಮ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಭಾರತೀಯ ಪುರಾತತ್ವ ಸರ್ವೇಕ್ಷಣಾಲಯ, ಹಂಪಿ ಹಾಗೂ ಜಿಲ್ಲಾಡಳಿತದ ಸಹಯೋಗದಲ್ಲಿ ಹಂಪಿ ಉತ್ಸವ-2026 ರ ನಿಮಿತ್ತ ''ವಿಜಯನಗರ ವೈಭವ ಬೃಹತ್ ಧ್ವನಿ ಮತ್ತು ಬೆಳಕು. ಕಾರ್ಯಕ್ರಮವನ್ನು ಹಂಪಿಯ ಆನೆಲಾಯದ ಆವರಣದಲ್ಲಿ ಫೆ.13 ರಿಂದ 19 ರ ವರೆಗೆ ಆಯೋಜಿಸಲಾಗಿದೆ.

ಧ್ವನಿ ಮತ್ತು ಬೆಳಕು ಕಾರ್ಯಕ್ರಮ ಆಯೋಜಿಸುವ ನಿಟ್ಟಿನಲ್ಲಿ ಫೆ.04 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸಂಡೂರು ರಸ್ತೆಯಲ್ಲಿನ ನೌಕರರ ಭವನದಲ್ಲಿ ಕಲಾವಿದರ ಆಯ್ಕೆ ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದೆ. ಆಸಕ್ತ ಕಲಾವಿದರು ಮತ್ತು ಭರತ ನಾಟ್ಯ ಪರಿಣಿತರು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು 2 ಸ್ಟ್ಯಾಂಪ್ ಸೈಜ್ ಭಾವಚಿತ್ರ, ಆಧಾರ ಕಾರ್ಡ ಅಥವಾ ಓಟರ್ ಐ.ಡಿ, ಗೆಜೆಟೆಡ್ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ, ಈ ಹಿಂದೆ ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಗ್ಗೆ ದಾಖಲಾತಿ, ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು ತಮ್ಮ ನೇಮಕಾತಿ ಪ್ರಾಧಿಕಾರದಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ ಸ್ಪಷ್ಟವಾದ ಅನುಮತಿ ಪತ್ರ ಹಾಗೂ ಜಿಲ್ಲಾಧಿಕಾರಿಗಳಿಂದ ಪತ್ರಕ್ಕೆ ಅನುಮೋದನೆ ಪಡೆದು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ.

ಆಯ್ಕೆಯಾದ ಕಲಾವಿದರು 7 ದಿನಗಳ ಕಾಲ ಪೂರ್ವ ಸಿದ್ದತಾ ತರಬೇತಿಯಲ್ಲಿ ಗೈರು ಹಾಜರಾತಿ ಇಲ್ಲದೇ ಭಾಗವಹಿಸುವುದು ಕಡ್ಡಾಯವಾಗಿರುತ್ತದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

# ಜಾತ್ರೆಗಳಲ್ಲಿ ಕಲೆ,ಸಂಸ್ಕೃತಿ, ಬಿಂಬಿಸುವ ಕಾರ್ಯ ಪ್ರಶಂಸನೀಯ:ಮುನವಳ್ಳಿ




ಗಂಗಾವತಿ,ಫೆ.01-

ಜಾತ್ರೆಗಳು ಮತ್ತು ಹಬ್ಬ ಹರಿದಿನಗಳಲ್ಲಿ ಕಲೆ, ಸಂಸ್ಕೃತಿಕ ಕಾರ್ಯ ಕ್ರಮಗಳನ್ನು ಬಿಂಬಿಸುವ ಕಾರ್ಯಗಳು ಪ್ರಶಂಸನೀಯವಾಗಿದೆ ಎಂದು ಮಾಜಿ ಶಾಸಕ ಪರಣ್ಣ ಮುನವಳ್ಳಿ ಹೇಳಿದರು. ಇಲ್ಲಿಯ ಹಿರೇಜಂತಕಲ್‌ನ ಪ್ರಸನ್ನ ಪಂಪಾವಿರೂಪಾಕ್ಷೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಮೂರು ದಿನಗಳ ಕಾಲದ ವೈವಿಧ್ಯಮಯ ಸಾಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು, ನಾಗರಿಕತೆ ಮತ್ತು ಜನಜೀವನ ಶೈಲಿಯ ಜೀವಂತಿಕ ಸಂಕೇತಗಳಾಗಿವೆ. ಸದಾಭಿರುಚಿಯ ಸಾಸ್ಕೃತಿಕ ಕಾರ್ಯಕ್ರಮಗಳನ್ನ ಆಯೋಜಿಸುವ ಮೂಲಕ ನಮ್ಮ ಸಂಸ್ಕೃತಿ, ಸಂಸ್ಕಾರಗಳನ್ನು ಬಿಂಬಿಸುವ ಕೆಲಸ ಮಾಡಬೇಕು ಎಂದು ಮಾಜಿಶಾಸಕ ಪರಣ್ಣ ಮುನವಳ್ಳಿ ಹೇಳಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಈ ಹಿಂದೆ ರಾಜಾಶ್ರಯ ಸಿಗುತಿತ್ತು. ಆದರೆ ಬದಲಾದ ಕಾಲ ಘಟ್ಟದಲ್ಲಿ ಕಾರ್ಯಕ್ರಮಗಳ ಆಯೋಜನೆಯು ಸಾಕಷ್ಟು ಆರ್ಥಿಕ ಹೊರೆಯಾಗುತ್ತಿದೆ. ದಾನಿಗಳು ನೆರವಿನಿಂದ ಇಂತಹ ಕಾರ್ಯಕ್ರಮ ನಡೆಯಬೇಕಿದ್ದು, ಕಲಾವಿದರು ಬದುಕಬೇಕು ಎಂದರು. ಈ ಸಂದರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ರಾಘವೇಂದ್ರ ಶ್ರೇಷ್ಠಿ, ಸೋಮನಾಥ ಪಟ್ಟಣಶೆಟ್ಟಿ, ಗಂಗಾಧರ ವಕೀಲರು, ಗಾಳಿ ಶಿವಪ್ಪ, ನಾಗರಾಜ್ ಶ್ರೀದೇವಿ ಮಿಲ್, ನಾಗರಾಜ್, ಪರಮೇಶ್ ಈಡಿಗೇರ್, ಬಸವರಾಜ್ ಅಂಗಡಿ, ಬಸವರಾಜ್ ಕೋರಿ, ಗವಿಸಿದ್ದಪ್ಪ ಆರಾಳ್ ಸೇರಿದಂತೆ ಇತರರಿದ್ದರು.

## ಒಂದನೇಯ ಪುಟದಿಂದ

## ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಸಿಕ್ಕಿದ್ದೇನು..?

ಹೈಸ್ಪೀಡ್ ರೈಲು ಯೋಜನೆ ಘೋಷಣೆಯಿಂದ ಕರ್ನಾಟಕದ ಪ್ರಮುಖ ಬೆಂಗಳೂರು ನಗರ, ತೆಲಂಗಾಣ ರಾಜ್ಯದ ಪ್ರಮುಖ, ಮಹಾರಾಷ್ಟ್ರದ ಮುಂಬೈ ಸೇರಿದಂತೆ ವಿವಿಧ ರಾಜ್ಯಗಳ ಮಹಾನಗರಗಳ ಮಧ್ಯ ರೈಲು ಸಾರಿಗೆ ಸುಧಾರಿಸಲಿದೆ. ಪ್ರಮುಖ ನಗರಗಳನ್ನು ಜೋಡಿಸುವ ಉದ್ದೇಶದಿಂದ ಈ ಏಳು ಹೈಸ್ಪೀಡ್ ರೈಲು ಯೋಜನೆ ಘೋಷಿಸಲಾಗಿದೆ ಎಂದು ಹೇಳಿದರು.

ಈ ಯೋಜನೆ ಮೂಲಕ ಪ್ರಮುಖ ಮಾರ್ಗಗಳ ಪ್ರಯಾಣ ಸಮಯ ಕಡಿಮೆಯಾಗಲಿದೆ. ಪ್ರಯಾಣಿಕರಿಗೆ ಆರಾಮದಾಯಕ ಅನುಭವ ನೀಡಲಿದೆ. ಮಹಾರಾಷ್ಟ್ರ ಜೊತೆಗೆ ದಕ್ಷಿಣ ಭಾರತದ ಪ್ರಮುಖ ರಾಜ್ಯಗಳಾದ ಕರ್ನಾಟಕದ ಬೆಂಗಳೂರು, ತಮಿಳುನಾಡಿನ ಚೆನ್ನೈ, ತೆಲಂಗಾಣದ ಹೈದರಾಬಾದ್, ದೆಹಲಿ ಹಾಗೂ ವಾರಣಾಸಿ ಮಧ್ಯೆ ಭವಿಷ್ಯದಲ್ಲಿ ಹೈಸ್ಪೀಡ್ ರೈಲುಗಳ ಸಂಚಾರ ಸೇವೆ ಸಿಗಲಿದೆ.

ರೈಲ್ವೆ ಇಲಾಖೆ ವ್ಯಾಪ್ತಿಯಲ್ಲಿ ಈಗಾಗಲೇ ಕ್ರಾಂತಿ ಸೃಷ್ಟಿಸಿದ್ದ ವಂದೇ ಭಾರತ್ ಎಕ್ಸ್ ಪ್ರೆಸ್ ಹಾಗೂ ಅಮೃತ್ ಭಾರತ್ ರೈಲುಗಳ ಬೆನ್ನಲ್ಲೇ ದೇಶದ ಏಳು ನಗರಗಳು ಹೈಸ್ಪೀಡ್ ರೈಲು ಕಾರಿಡಾರ್ ಯೋಜನೆ ಪಡೆದಿವೆ. ಇದರಿಂದ ಸುದೀರ್ಘ ಪ್ರಯಾಣವನ್ನು ಗಂಟೆಗಳಲ್ಲಿ ಕ್ರಮಿಸಬಹುದಾಗಿದೆ. ಇದಕ್ಕೆ ತಕ್ಕಂತೆ ಈಗಾಗಲೇ ವಂದೇ ಭಾರತ್ ಸ್ಲೀಪರ್ ರೈಲುಗಳ ಕಾರ್ಯಾಚರಣೆ ಆರಂಭಿಸಿದೆ. ಪೂರಕವಾಗಿ ರೈಲ್ವೆ ಹಳಿ, ದ್ವಿಪಥ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಒಟ್ಟಾರೆ ರೈಲ್ವೆ ಮೂಲಸೌಕರ್ಯ ಸುಧಾರಿಸಲಾಗಿದೆ. ಅದರ ಬೆನ್ನಲ್ಲೇ ಹೊಸ ರೈಲ್ವೆ ಯೋಜನೆ ಘೋಷಣೆ ಆಗಿರುವುದು ದೇಶದ ಜನರಲ್ಲಿ ಸಂತಸ ಮೂಡಿಸಿದೆ.

ಪೂರ್ವ ಮತ್ತು ಪಶ್ಚಿಮದ ನಡುವೆ ಸಂಪರ್ಕ ಕಲ್ಪಿಸಲು ಈ ಕಾರಿಡಾರ್ ಯೋಜನೆ ಅನುಕೂಲವಾ ಗಲಿದ್ದು, ಮುಂದಿನ 5 ವರ್ಷಗಳಲ್ಲಿ ಕಾರ್ಯಾ ರಂಭವಾಗಲಿವೆ. ಜಲಮಾರ್ಗಗಳ ನಿರ್ವಹಣೆ ಗಾಗಿ ತರಬೇತಿ ಕೇಂದ್ರವನ್ನೂ ಸಹ ಪ್ರಾರಂಭಿಸಲಾ ಗುವುದು. ಇದರಿಂದ ಯುವಕರಿಗೆ ಉದ್ಯೋಗ ದೊರೆಯ ಲಿದೆ. ವಾರಾಣಸಿ ಮತ್ತು ಪಾಟ್ನಾ ನಡುವೆಯೂ ಜಲಮಾರ್ಗಗಳನ್ನು ಪ್ರಾರಂಭಿಸು ತ್ತೇವೆ ಎಂದು ತಿಳಿಸಿದರು.ಏಳು ಪ್ರಮುಖ ಹೈಸ್ಪೀಡ್ ರೈಲು ಕಾರಿಡಾರ್ ಮಾರ್ಗಗಳು:1) ಮುಂಬೈ-ಪುಣೆ,2) ಪುಣೆ-ಹೈದರಾಬಾದ್, 3) ಹೈದರಾಬಾದ್-ಬೆಂಗಳೂರು, 4) ಹೈದರಾಬಾದ್-ಚನ್ನೈ,5)ಚೆನ್ನೈ-ಬೆಂಗಳೂರು,6) ದೆಹಲಿ-ವಾರಾಣಸಿ,7) ವಾರಾಣಸಿ-ಸಿಲಿಗುರಿ

## ಮಡಿವಾಳ ಮಾಚಿದೇವರ ಮಾರ್ಗದಲ್ಲಿ ನಡೆಯರಿ: ಪರಮೇಶ್ವರ ಸಾಲಿಮಠ

ಶ್ರಮಿಸಬೇಕು. ಸಮಾಜದ ಮಕ್ಕಳಿಗೆ ಹೆಚ್ಚಿನ ಮಟ್ಟದಲ್ಲಿ ಶಿಕ್ಷಣ ನೀಡಲು ಪೋಷಕರು ಆದ್ಯತೆ ನೀಡಬೇಕು. ಉನ್ನತ ಹುದ್ದೆಯಲ್ಲಿ ಸಮಾಜದವರು ಕಾರ್ಯನಿರ್ವಹಿಸುವ ಮೂಲಕ ಸಮಾಜದ ಏಳಿಗೆಗೆ ಶ್ರಮಿಸಬೇಕು ಎಂದು ಹೇಳಿದರು.

ಮಡಿವಾಳ ಮಾಚಿದೇವ ಭಾವಚಿತ್ರ ಮೆರವಣಿಗೆ: ಕಾರ್ಯಕ್ರಮಕ್ಕೂ ಮೊದಲು ನಗರದ ಆರ್.ಟಿ.ಓ ಸರ್ಕಲ್ ಹತ್ತಿರುವರ ಮಡಿವಾಳ ಮಾಚಿದೇವ ಅವರ ಪುತ್ಥಳಿಗೆ ಸ್ವಾಮೀಜಿಗಳು ಸೇರಿದಂತೆ ವಿವಿಧ ಗಣ್ಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಈ ವೇಳೆ ಕಿಲ್ಲೇ ಬೃಹನ್ಮಠದ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿ, ಸೋಮವಾರಪೇಟೆ ಹಿರೇಮಠದ ಅಭಿನವ ರಾಚೋಟಿ ವೀರಶಿವಾಚಾರ್ಯ ಸ್ವಾಮಿ ಅವರ ಸಾನಿಧ್ಯದಲ್ಲಿ ಪೂಜೆ ಸಲ್ಲಿಸಲಾಯಿತು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಚಾಲನೆ ನೀಡಿದರು. ಈ ವೇಳೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಮುಖಂಡರಾದ ರವಿ ಜಲ್ದಾರ್ ಸೇರಿದಂತೆ ಸಮಾಜದ ಮುಖಂಡರು ಶಾಸಕರಿಗೆ ಸಾಥ್ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ್, ಕಂದಾಯ ಅಧಿಕಾರಿ ನರಸಿಂಹ ರೆಡ್ಡಿ, ಸಮಾಜದ ಮುಖಂಡರಾದ ಪಿ.ಶಿವಮೂರ್ತಿ, ಪಿ.ಮಲ್ಲೇಶ, ಎಂ.ಹುಸೇನ್, ನರಸಪ್ಪ, ವೆಂಕಟೇಶ, ಮುನಿಸ್ವಾಮಿ, ಜಿ.ವೆಂಕಟೇಶ, ಜಮಾನ, ಈರಮ್ಮ, ದಂಡಪ್ಪ ಬಿರಾದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

## ಸರ್ಕಾರಿ, ಅನುದಾನಿತ, ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಸುರಕ್ಷತೆ ಕ್ರಮ ಕೈಗೊಳ್ಳಲು ಸೂಚನೆ

ಹೊಣೆಗಾರರನ್ನಾಗಿ ಮಾಡಲಾಗುವುದು. ಜಿಲ್ಲೆಯ ಎಲ್ಲಾ ಶಾಲೆಗಳ ಸುರಕ್ಷತೆ ಕುರಿತು ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರಾಯಚೂರು ರವರು ವೈಯಕ್ತಿಕ ಮುತುವರ್ಜಿ ವಹಿಸಿ ಶಾಲಾ ಪರಿಸರವನ್ನು ಸುರಕ್ಷಿತವಿರಿಸಿಕೊಳ್ಳುವಲ್ಲಿ ನಿರ್ಲಕ್ಷ್ಯ ತೋರಿದಲ್ಲಿ ಶಿಸ್ತಿನ ಕ್ರಮ ಜರುಗಿಸಲಾಗುವುದೆಂದು ಸಿಇಓ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತ್ತನೂರು, ನವಲಕಲ್ ಗ್ರಾ.ಪಂಗೆ ಜಿ.ಪಂ ಸಿಇಓ ಭೇಟಿ

ಜಾಗಯಿದ್ದು, ಸಸಿಗಳನ್ನು ನೆಟ್ಟು ನರ್ಸರಿ ಮಾಡುವಂತೆ ಪಿಡಿಓರವರಿಗೆ ಸೂಚಿಸಿದರು. ಗ್ರಂಥಾಲಯದಲ್ಲಿ ಓದುಗರ ಅಭಿರುಚಿಗೆ ತಕ್ಕಂತೆ ಪುಸ್ತಕಗಳನ್ನು ಸರಿಯಾಗ ಜೋಡಣೆ ಮಾಡಬೇಕು. ಶಾಲಾ ವಿದ್ಯಾರ್ಥಿಗಳಿಗೆ ಗಣಕಯಂತ್ರ ಸಂಪರ್ಕ ಕಲ್ಪಿಸಬೇಕು. ಪುಸ್ತಕಗಳನ್ನು ನಿಮ್ಮ ಮನಬಂದಂತೆ ಬಿಸಾಡಿದೆ ನೀಟಾಗಿ ರ್ಯಾಕನಲ್ಲಿ ಇಡಬೇಕು. ಎರಡು ಕೊಠಡಿಗಳಲ್ಲಿ ಗ್ರಂಥಾಲಯ ಮಾಡಬೇಕು. ಇನ್ನೊಂದು ಕೊಠಡಿಯನ್ನು ಸಂಗ್ರಹಣೆ ಮಾಡಬೇಕೆಂದರು.

ಸಿಬ್ಬಂದಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನೀಡುವ ನಿರ್ದೇಶನದಂತೆ ಕಾರ್ಯನಿರ್ವಹಿಸಬೇಕು. ಪ್ರತಿ ತಿಂಗಳು ಸ್ವಚ್ಛತಾ ಅಭಿಯಾನ ಮಾಡಬೇಕೆಂದರು. ಪಂಚಾಯತಿ ಸಿಬ್ಬಂದಿಯ ಸಹ ಗುರಿ ಅನುಗುಣವಾಗಿ ತೆರಿಗೆ ವಸೂಲಿ ಮಾಡಬೇಕು. 15 ದಿನಗಳಗೊಮ್ಮೆ ನೀರಿನ ಟ್ಯಾಂಕ್ ಶುದ್ಧೀಕರಣ ಮಾಡಬೇಕೆಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಪಂಚಾಯತಿಯಲ್ಲಿ ನರೇಗಾ ಸೇರಿದಂತೆ ಇನ್ನಿತರ ಕಾಮಗಾರಿಗಳಿಗೆ ಸಂಬಂಧಿಸಿದ ಕಡತಗಳನ್ನು ಕಡ್ಡಾಯವಾಗಿ ನಿರ್ವಹಣೆ ಮಾಡಬೇಕು.

ಅಂಗನವಾಡಿ ಕೇಂದ್ರಕ್ಕೆ ಭೇಟಿ: ಅಂಗನವಾಡಿ ಕೇಂದ್ರಕ್ಕೆ ಮಾನ್ಯರು ಭೇಟಿ ನೀಡಿ, 3 ರಿಂದ 6 ವರ್ಷದೊಳಗಿನ ಮಕ್ಕಳ ನೊಂದಾಣೆಯಾಗಿರುವ ಬಗ್ಗೆ ಹಾಜರಾತಿ ಪರಿಶೀಲನೆ ಮಾಡಿದರು. ಪ್ರತಿ ನಿತ್ಯ ಎಷ್ಟು ಮಕ್ಕಳು ಕೇಂದ್ರಕ್ಕೆ ಬರುತ್ತಾರೆ ಎಂಬುದರ ಬಗ್ಗೆ ಸರ್ಮಪಕವಾಗಿ ಮಾಹಿತಿ ನೀಡದ ಕೇಂದ್ರ ಮೇಲ್ವಿಚಾರಕಿ ವಿರುದ್ಧ ಗರಂ ಆದರು. ಮಕ್ಕಳಿಗೆ ಫುಡ್ ಮೆನು ಪ್ರಕಾರ ಉಪಹಾರ ನೀಡದೆ ಹಾಗೂ ಮೆನು ಕೇಂದ್ರದಲ್ಲಿ ಗೋಡೆಗೆ ಹಾಕದೆ ಇರುವ ಬಗ್ಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಕಾರ್ಯಕರ್ತೆಯರ ವಿರುದ್ದ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆಂದು ಎಚ್ಚರಿಕೆ ನೀಡಿದರು.

ನಾರಬಂಡಾ ಗ್ರಾಮದಲ್ಲಿ ನರೇಗಾದಡಿ ನಾಲಾ ಹೊಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ಮಾನ್ಯರು, ಕೂಲಿಕಾರರು ಮೇಜರಮೆಂಟ್ ಪ್ರಕಾರ ಕೆಲಸ ಮಾಡದೆ ಇರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಅತ್ತನೂರು ಗ್ರಾ.ಪಂಗೆ ಭೇಟಿ: ಅತ್ತನೂರು ಗ್ರಾಮದಲ್ಲಿರುವ ಕೂಸಿನ ಮನೆ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಹಾಜರಾತಿ, ಫುಡ್ ಮೆನು ಪ್ರಕಾರ ಮಕ್ಕಳಿಗೆ ಉಪಹಾರ ನೀಡುತ್ತಿರುವ ಬಗ್ಗೆ ಕೇರ್ ಟೇಕರ್ ರಿಂದ ಮಾಹಿತಿ ಪಡೆದುಕೊಂಡರು. ನಂತರ ಪಂಚಾಯತಿಯಲ್ಲಿ ಸಿಬ್ಬಂದಿಗಳು ನಿರ್ವಹಿಸುತ್ತಿರುವ ಕೆಲಸದ ಕುರಿತು ಮಾಹಿತಿ ಪಡೆದುಕೊಂಡರು. ಪಂಚಾಯತಿ ವ್ಯಾಪ್ತಿಯಲ್ಲಿ ಸ್ವಚ್ಛತೆ, ಕುಡಿಯುವ ನೀರು, ಕಸ ವಿಲೇವಾರಿ ಸರ್ಮಪಕವಾಗಿ ಆಗಬೇಕೆಂದರು. ಗ್ರಾ.ಪಂ ಮಾನವ ದಿನಗಳು ಗುರಿಗೆ ಅನುಗುಣವಾಗಿ ಪ್ರಗತಿ ಸಾಧಿಸಲಾಗಿದೆ ಎಂದು ಪಿಡಿಓರವರು ತಿಳಿಸಿದರು. ತೆರಿಗೆ ವಸೂಲಿ ಮಾಡಬೇಕೆಂದರು. ಗ್ರಾಮದಲ್ಲಿರುವ 17.7 ಎಕರೆಯಲ್ಲಿರುವ ಸರಕಾರಿ ಜಾಗದಲ್ಲಿ ಕುಡಿಯುವ ನೀರಿನ ಕೆರೆ ನಿರ್ಮಾಣಕ್ಕೆ ಮೀಸಲಿಟ್ಟಿರುವ ಸ್ಥಳದಲ್ಲಿ ಅಕ್ರಮವಾಗಿ ಮರಂ ಸಾಗಾಣಿಕೆ ಮಾಡುತ್ತಿರುವ ದೂರಿನ ಮೇರೆಗೆ ಸ್ಥಳ ಪರಿಶೀಲಿಸಿ, ತಾಲೂಕ ಮಟ್ಟದ ಟಾಸ್ಕ್ ಫೋರ್ಸ ಸಮಿತಿ ಸಭೆ ಮಾಡಿ ಅಕ್ರಮವಾಗಿ ಮರಂ ಸಾಗಾಣಿಕೆ ಮಾಡುವವರ ವಿರುದ್ದ ಕಠಿಣ ಕ್ರಮ ಜರುಗಿಸಬೇಕೆಂದು ಸೂಚಿಸಿದರು. ಕೆರೆ ನಿರ್ಮಾಣ ಮಾಡಲು ಡಿಪಿಆರ್ ತಯಾರಿಸುವಂತೆ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸತೀಶ್ ಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಯೋಜನಾಧಿಕಾರಿ ಚನ್ನವೀರಪ್ಪ ಕೋರಿ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸತೀಶ್, ಸೆಕ್ಷನ್ ಅಧಿಕಾರಿ ರವಿ, ಪಿ.ಆರ್.ಇ ವೆಂಕಟೇಶ, ಪಿಡಿಓ ವಿಜಯ ಕುಮಾರ, ಮಮತಾ ಹಾಗೂ ನರೇಗಾ ತಾಂತ್ರಿಕ ಸಿಬ್ಬಂದಿ, ರಾಜೀವ್ ಗಾಂಧಿ ಫೇಲೋ ಇದ್ದರು.

## ಕಾಯಕದ ಜೊತೆಗೆ ಶಿಕ್ಷಣ ಪಡೆಯಬೇಕು - ಚುಕ್ಕಿ ಸೂಗಪ್ಪ ಸಾಹುಕಾರ

ಜೊತೆಗೆ ಶಿಕ್ಷಣವನ್ನು ಪಡೆದು ಮುಂದೆ ಬರಬೇಕಾಗಿದೆ ಎಂದು ಹಿರಿಯ ಮುಖಂಡರಾದ ಚುಕ್ಕಿ ಸೂಗಪ್ಪ ಸಾಹುಕಾರ ಹೇಳಿದರು. ಪಟ್ಟಣದ ವಾರ್ಡ ನಂ 01 ಎಪಿಎಂಸಿ ಮಡಿವಾಳ ಮಾಚಿದೇವರ ನಾಮಫಲಕಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಪಣೆ ಮಾಡಲಾಯಿತು. ಸದಸ್ಯ ಕೃಷ್ಣ ನಾಯಕ ಮಾತನಾಡಿ ಮೊದಲಿನಿಂದಲೂ ಸೂರ್ಯ ಹುಟ್ಟುವ ಮುನ್ನ ಎದ್ದು ತಮ್ಮ ಕಾರ್ಯ ಆರಂಭಿಸುತ್ತಿದ್ದರು. ಶುದ್ಧ ಶಿವಭಕ್ತರ ಕಾಯಕದಲ್ಲಿ ನಿಷ್ಠೆ ಉಳ್ಳವರ ಬಟ್ಟೆಗಳನ್ನು ಮಾತ್ರ ಮಡಿ ಮಾಡುತ್ತಿದ್ದರು. ಸೋಮಾರಿಗಳ, ಪರಾವಲಂಬಿಗಳ ಬಟ್ಟೆಗಳನ್ನು ಎಂದಿಗೂ ಮುಟ್ಟುತ್ತಿರಲಿಲ್ಲ. ಮಡಿಗೊಳಿಸಿದ ಬಟ್ಟೆಯನ್ನು ಯಾರೂ ಅಪವಿತ್ರ ಗೊಳಿಸಬಾರದೆಂದು ದಾರಿಯಲ್ಲಿ ಬರುವಾಗ ಗಂಟೆ ಬಾರಿಸುತ್ತಾ ಬರುತ್ತಿದ್ದರು. ಹೀಗಾಗಿ, 'ವೀರಗಂಟೆ ಮಾಚಯ್ಯ' ಎಂಬ ಹೆಸರು ಬಂತು.

ತಹಸೀಲ್ದಾರ ಅಶೋಕ ಪವಾರ ಮಾತನಾಡಿ ಶರಣರ ಸಂಪರ್ಕದಿಂದ ಮಹಾಪುರುಷ: ಮಡಿವಾಳ ಕುಲದಲ್ಲಿ ಹುಟ್ಟಿದ್ದರೂ ಮಾಚಯ್ಯ ಉತ್ತಮ ಶಿಕ್ಷಣ ಮತ್ತು ಶರಣರ ಸಂಪರ್ಕದಿಂದ ಮಹಾಪುರುಷರಾದರು. ಕಲ್ಯಾಣ ಕ್ರಾಂತಿಯ ಇತಿಹಾಸದಲ್ಲಿ ಮಾಚಯ್ಯ ಶ್ರೇಷ್ಠ ವ್ಯಕ್ತಿಗಳಲ್ಲಿ ಒಬ್ಬರು. ಜ್ಞಾನಜ್ಯೋತಿಯಿಂದ ಲೋಕವನ್ನು ಬೆಳಗಿಸಿದ ಮಾಚಯ್ಯ 'ನುಡಿದಂತೆ ನಡೆದ, ನಡೆದಂತೆ ನುಡಿದ' ಶರಣರಲ್ಲಿ ಒಬ್ಬರು. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅಧಿಕಾರವಿದೆ ಎಂದು ತಿಳಿಸಿ ಸರ್ವರಿಗೂ ಆಧ್ಯಾತ್ಮಿಕ ಉನ್ನತಿ ಪಡೆಯುವಂತೆ ಪ್ರೋತ್ಸಾಹಿಸಿದರು. ಎಲ್ಲ ಶರಣರು ಮಾಚಯ್ಯನನ್ನು 'ಮಾಚಿ ತಂದೆ' ಎಂದು ಕರೆದಿದ್ದಾರೆ. 'ಅನುಭವ ಮಂಟಪ' ನಿರ್ವಹಣದ ಕಾರ್ಯದಲ್ಲಿ ಮಾಚಯ್ಯನವರ ಪಾತ್ರ ದೊಡ್ಡದು. ಮಾರ್ಮಿಕ ವಚನಗಳನ್ನು ರಚಿಸಿ ಕೊಡುಗೆ ನೀಡಿದ್ದಾರೆ ಎಂದರು.ಹಿರಿಯ ಮುಖಂಡರಾದ ಎನ್ ಉದಯಕುಮಾರ,ರಮೇಶ ದರ್ಶನಕರ್, ಮಲ್ಲಪ್ಪ ಸಾಹುಕಾರ ಅರಕೇರಿ, ಪ.ಪಂಚಾಯತಿ ಉಪಾಧ್ಯಕ್ಷೆ ಲಕ್ಷ್ಮೀ, ಸದಸ್ಯರಾದ ಕೃಷ್ಣನಾಯಕ, ರಾಘವೇಂದ್ರ ಖಾಜನಗೌಡ,ಚಂದ್ರಶೇಖರ ಹಡಪದ್, ಡಿ ಯಮನೂರು,ರಾಜಭೋವಿ ಮಡಿವಾಳ ಸಮಾಜದ ಮುಖಂಡರಾದ ಶರಣಪ್ಪ, ಹುಲ್ಲಿಗೆಪ್ಪ, ಬಸವರಾಜ ಬುದೆಪ್ಪ ನಾಗಪ್ಪ ಮಲ್ಲಯ್ಯ ರವಿ ಆನಂದ ಗಿರಿಜಪ್ಪ ಮಲ್ಲಿಕಾರ್ಜುನ, ಪ್ರಕಾಶ ಕಾರ್ಪೆಂಟರ್, ರಾಘು, ನಾಗರಾಜ, ಹುಲ್ಲಿಗೆಪ್ಪ ಸೇರಿದಂತೆ ಇನ್ನಿತರರು ಇದ್ದರು.

## ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ

# ಪೋಕ್ಸೋ ಪ್ರಕರಣ ದಾಖಲು ಕಡ್ಡಾಯ: ಶಶಿಧರ್ ಕೋಸಂಬೆ

ಬಳ್ಳಾರಿ,ಫೆ.01-

ಪೋಕ್ಸೋ ಘಟನೆ ನಡೆದ ಸಂದರ್ಭದಲ್ಲಿ ಪ್ರಕರಣ ದಾಖಲಿಸುವುದು ಕಡ್ಡಾಯವಾಗಿದ್ದು, ವಿಳಂಬ ತೋರಿದಲ್ಲಿ ಸಂಬಂಧಿಸಿದವರ ಮೇಲೆ ಕ್ರಮ ಜರುಗಿಸಲು ಕಾನೂನಿನಡಿ ಅವಕಾಶವಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೊಸಂಬೆ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ನ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಶನಿವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಬಗ್ಗೆ ಮಾಹಿತಿ ತಿಳಿದಿರುವ ಯಾರೇ ವ್ಯಕ್ತಿ, ಪೋಷಕರು ಅಥವಾ ಶಾಲಾ ಸಿಬ್ಬಂದಿ ಕೂಡಲೇ ಪೊಲೀಸ್ ಠಾಣೆ ಅಥವಾ ಮಕ್ಕಳ ರಕ್ಷಣಾ ಘಟಕಕ್ಕೆ ವರದಿ ಮಾಡುವುದು ಕಡ್ಡಾಯವಾಗಿದೆ ಎಂದರು.

ಮಕ್ಕಳ ರಕ್ಷಣಾ ನೀತಿ 2016 ಕಾಯ್ದೆ ಅನುಷ್ಠಾನಗೊಳಿಸಿ:

ಜಿಲ್ಲೆಯ ಎಲ್ಲಾ ಶಾಲೆಗಳು, ವಸತಿ ನಿಲಯಗಳ ಮಕ್ಕಳಿಗೆ ಯಾವುದೇ ರೀತಿಯ ಹಿಂಸೆ, ದೌರ್ಜನ್ಯ, ಶೋಷಣೆಯಿಂದ ರಕ್ಷಣೆ ಒದಗಿಸುವ ಮೂಲಕ ಸುರಕ್ಷಿತ ವಾತಾವರಣ ಕಲ್ಪಿಸಬೇಕು. ಪ್ರತಿಯೊಂದು ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ಹಕ್ಕುಗಳ ಸುರಕ್ಷಾ ಸಮಿತಿ ರಚಿಸಬೇಕು. ದೂರು ಪೆಟ್ಟಿಗೆಗಳನ್ನು ಅಳವಡಿಸಬೇಕು. ಅವುಗಳನ್ನು ನಿಯಮಿತವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ದೌರ್ಜನ್ಯಕ್ಕೊಳಗಾದ ಮಕ್ಕಳ ವೈಯಕ್ತಿಕ ಮಾಹಿತಿ ಮತ್ತು ಅವರ ಕುರಿತಾದ ದೂರುಗಳನ್ನು ಗೌಪ್ಯವಾಗಿ ಇಡಬೇಕು. ಮಕ್ಕಳ ಕಳ್ಳಸಾಗಣೆ, ಬಾಲಕಾರ್ಮಿಕ ಪದ್ಧತಿ, ಬಾಲ ವಿವಾಹದ ವಿರುದ್ಧ ಜಾಗೃತಿ ಮೂಡಿಸುವುದು. ಲೈಂಗಿಕ ದೌರ್ಜನ್ಯದಿಂದ ಮಕ್ಕಳ ರಕ್ಷಣೆ ಕಾಯ್ದೆ 2012 ರಡಿ ಕ್ರಮ ಅನುಷ್ಠಾನಗೊಳಿಸುವುದು ಒಳಗೊಂಡ ಮಕ್ಕಳ ರಕ್ಷಣಾ ನೀತಿ 2016 ಕಾಯ್ದೆಯನ್ನು ತಪ್ಪದೇ ಅನುಷ್ಠಾನಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.




ಜಿಲ್ಲೆಯಲ್ಲಿ ಹಲವೆಡೆ ಮಕ್ಕಳು ಕಾಣೆಯಾದ ಪ್ರಕರಣಗಳು ದಾಖಲಾಗಿದ್ದು, ಹಲವು ಪ್ರಕರಣಗಳಲ್ಲಿ ಪತ್ತೆ ಮಾಡಲು ಸಾಧ್ಯವಾಗಿಲ್ಲ. ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುವ ಮೂಲಕ ಇತ್ಯರ್ಥಪಡಿಸಲು ಕ್ರಮವಹಿಸಬೇಕು. ಕಾಣೆಯಾದ, ಪತ್ತೆಯಾಗದ ಮಕ್ಕಳ ಪಟ್ಟಿ ಸಿದ್ದಪಡಿಸಿಕೊಂಡು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ವರದಿ ನೀಡಬೇಕು ಎಂದರು.

ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ ಕಾನೂನು ಪರಿಣಾಮಕಾರಿ ಅನುಷ್ಠಾನಗೊಳಿಸಿ:

ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ಎಂಬ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಕಾನೂನಿನ ಮಾದರಿ ಹಾಗೂ ಶಾಸನ ಬದ್ಧ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಹೇಳಿದರು.

ಸಮಾಜದಲ್ಲಿ ಲಿಂಗಾನುಪಾತದ ಅಸಮತೋಲನವು ಗಂಭೀರ ಸಾಮಾಜಿಕ ಸಮಸ್ಯೆಯಾಗಿದ್ದು, ಇದರ ಮೂಲ ಕಾರಣಗಳಲ್ಲಿ ಪ್ರಮುಖವಾದದ್ದು ಭ್ರೂಣ ಲಿಂಗ ಪತ್ತೆ ಹಾಗೂ ಹೆಣ್ಣು ಭ್ರೂಣ ಹತ್ಯೆಆಗಿದೆ. ಈ ಸಾಮಾಜಿಕ ಪಿಡುಗನ್ನು ತಡೆಯುವ ಉದ್ದೇಶದಿಂದ ಗರ್ಭಪೂರ್ವ ಮತ್ತು ಪ್ರಸವಪೂರ್ವ ಭ್ರೂಣ ಲಿಂಗ ಪತ್ತೆ, ತಂತ್ರ ವಿಧಾನಗಳ ನಿಷೇದ ಕಾಯ್ದೆ ಜಾರಿಗೆ ತಂದಿದ್ದು, 2003ರಲ್ಲಿ ಕಾಯ್ದೆಯನ್ನು ಇನ್ನಷ್ಟು ಬಲಪಡಿಸಲಾಗಿದೆ. ಹಾಗೂ ಭ್ರೂಣಲಿಂಗ ಪತ್ತೆಯನ್ನು ಸಂಪೂರ್ಣವಾಗಿ ನಿಷೇಧಿಸುವುದರ ಜೊತೆಗೆ ಹೆಣ್ಣು ಮಕ್ಕಳ ಜನನವನ್ನು ಉತ್ತೇಜಿಸುವುದು, ಲಿಂಗಾನುಪಾತವನ್ನು ಸಮತೋಲನದಲ್ಲಿರಿಸುವುದು ಹಾಗೂ ಮಹಿಳೆಯರ ಗೌರವ ಮತ್ತು ಹಕ್ಕುಗಳನ್ನು ರಕ್ಷಿಸುವುದೇ ಈ ಕಾಯ್ದೆಯ ಉದ್ದೇಶವಾಗಿದೆ ಎಂದರು.

ಜಿಲ್ಲೆಯಲ್ಲಿ ಬಾಲ್ಯವಿವಾಹ ಪದ್ಧತಿಯನ್ನು ಬೇರು ಸಮೇತ ಕಿತ್ತು ಹಾಕಲು ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದ್ದು, ಎಲ್ಲರೂ ಕೈಜೋಡಿಸಬೇಕು ಎಂದು ತಿಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಸಾಮಾಜಿಕ ಜಾಲತಾಣಗಳಿಂದ ಮಕ್ಕಳಿಗೆ ಆಪತ್ತು: ಶಶಿಧರ್ ಕೋಸಂಬೆ



ಬಳ್ಳಾರಿ,ಫೆ.01-

ಸಾಮಾಜಿಕ ಜಾಲತಾಣ ಹಾಗೂ ಮೊಬೈಲ್ ವ್ಯಸನದಿಂದ ಮಕ್ಕಳ ಭವಿಷ್ಯಕ್ಕೆ ದೊಡ್ಡ ಕಂಟಕವಾಗಿ ಪರಿಣಮಿಸಿವೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಹೇಳಿದರು. ಶನಿವಾರ ನಗರದ ಜಿಲ್ಲಾ ಪಂಚಾಯಿತಿಯ ಹಳೆಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಶಾಲಾ ಮಕ್ಕಳು, ಪೋಷಕರು ಹಾಗೂ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಸದಸ್ಯರ ಅಹವಾಲು ಸ್ವೀಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದ ಆಯ್ದ 5 ಜಿಲ್ಲೆಗಳಲ್ಲಿ ನಡೆಸಿದ ಸಮೀಕ್ಷೆಯ ಪ್ರಕಾರ ಶೇ.42ರಷ್ಟು ಮಕ್ಕಳು ಸಾಮಾಜಿಕ ಜಾಲತಾಣಗಳ ಬಳಕೆಯಿಂದ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು.

ಮಕ್ಕಳು ದಿನಕ್ಕೆ 6ರಿಂದ 7 ಗಂಟೆಗಳ ಕಾಲ ಮೊಬೈಲ್‌ನಲ್ಲಿ ಕಳೆಯುತ್ತಿರುವುದು ಅವರ ಮೆದುಳಿನ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಬೀರಲಿದೆ. ಪೋಷಕರು ಮಕ್ಕಳೊಂದಿಗೆ ಆಪ್ತವಾಗಿ ಕಾಲ ಕಳೆಯುವ ಮೂಲಕ ಅವರನ್ನು ಈ ವ್ಯಸನದಿಂದ ದೂರವಿಡಬಹುದು ಎಂದು ಕಿವಿಮಾತು ಹೇಳಿದರು.

1989ರ ವಿಶ್ವಸಂಸ್ಥೆಯ ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಭಾರತ ಸಹಿ ಹಾಕಿ ಮೂರು ದಶಕಗಳೇ ಕಳೆದರೂ, ಮಕ್ಕಳ ಸುರಕ್ಷತೆ ಇಂದಿಗೂ ಸವಾಲಾಗಿದೆ. ದೇಶದ ಶೇ.41ರಷ್ಟು ಹಾಗೂ ರಾಜ್ಯದ ಸುಮಾರು 2.5 ಕೋಟಿ ಮಕ್ಕಳ ರಕ್ಷಣೆಯ ಬಗ್ಗೆ ನಮ್ಮೆದುರು ಪ್ರಶ್ನೆಗಳಿವೆ. ಇತ್ತೀಚೆಗೆ ಶಾಲೆಗಳಲ್ಲಿ ಸಂಭವಿಸುತ್ತಿರುವ ವಿದ್ಯುತ್ ಸ್ಪರ್ಶದಂತಹ ದುರಂತಗಳು ಮತ್ತು ವಾಹನ ಅಪಘಾತಗಳು ಅಧಿಕಾರಿಗಳ ಬೇಜವಾಬ್ದಾರಿಗೆ ಸಾಕ್ಷಿಯಾಗಿವೆ. ಮಗು 18 ವರ್ಷ ತುಂಬುವವರೆಗೆ ಘನತೆಯಿಂದ ಬದುಕುವ ವಾತಾವರಣ ನಿರ್ಮಿಸುವುದು ಎಲ್ಲರ ಹೊಣೆಯಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಸುಭದ್ರಾದೇವಿ, ಡಿಡಿಪಿಐ ಬಿ.ಉಮಾದೇವಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ತ್ರಿವೇಣಿ ಪತ್ತಾರ್, ಸದಸ್ಯೆ ಗೌಸಿಯಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಇದ್ದರು.

## ಮರಳಿ ಗ್ರಾಮದಲ್ಲಿ ಮಧ್ವನವಮಿ ಆಚರಣೆ



ಗಂಗಾವತಿ,ಫೆ.01-

ತಾಲೂಕಿನ ಮರಳಿ ಗ್ರಾಮದಲ್ಲಿ ಮಧ್ವನವಮಿ ಉತ್ಸವವನ್ನು ಅದ್ದೂರಿಯಾಗಿ ಮರಳಿ, ಪ್ರಗತಿನಗರ ಹಾಗೂ ಜಂಗಮರ ಕಲ್ಗುಡಿಯ ವಿಪ್ರ ಬಾಂಧವರು ಆಚರಿಸಿದರು.

ಬೆಳಿಗ್ಗೆ ನಿರ್ಮಾಲ್ಯ ವಿಸರ್ಜನೆ, ಮಹಿಳೆಯರಿಂದ ಭಜನೆ, ಕೃಷ್ಣಾಚಾರ ಜೋಶಿ ಹಿರೇಜಂತಕಲ್ ಇವರಿಂದ ಹನುಮಂತ ದೇವರಿಗೆ ಮಧು ಅಭಿಷೇಕ, ಎಳೆನೀರು ಅಭಿಷೇಕ, ಪಂಚಾಮೃತ ಅಭಿಷೇಕ, ಹೂವು ಹಾಗೂ ತುಳಸಿ ಅಲಂಕಾರ ಮತ್ತು ಎಲಿಚೆಟ್ಟಿ ಅರ್ಪಣೆ ಸೇವೆ ಜರುಗಿತು.

ದೇಗುಲದ ಸುತ್ತಲು ಆಂಜನೇಯಸ್ವಾಮಿ ಮತ್ತು ವ'ಂಧ್ವಾಚಾರ್ಯರ' ಫೋಟೊದೊಂದಿಗೆ ಪಲ್ಲಕ್ಕಿ ಉತ್ಸವ ಜರುಗಿತು. ಈ ಸಮಾರಂಭದಲ್ಲಿ ರಮೇಶ ಕುಲಕರ್ಣಿ, ಶೇಷಗಿರಿ ಕುಲಕರ್ಣಿ, ಪವನ ಕುಲಕರ್ಣಿ, ಮನೋಹರ್ ಜಾಲಿಹಾಳ, ಗಿರಿಜಾ ಕುಲಕರ್ಣಿ, ಅನುಪಮಾ ಕುಲಕರ್ಣಿ, ಪುಷ್ಪಾ, ಗಾಯತ್ರಿ ಕುಲಕರ್ಣಿ, ದಿವ್ಯಾ ಕುಲಕರ್ಣಿ, ಅರ್ಚನಾ ಮಹಿಪತಿ, ಪವಿತ್ರ ಗುರುರಾಜ್, ರಮಾ ಕಾತರಕಿ, ರಂಜನಾ ಅಳವಂಡಿ, ಸೀತಾ ಮನೋಹರ ಸೇರಿದಂತೆ ಭಕ್ತರು ಭಾಗವಹಿಸಿದ್ದರು.

## ಫೆ.5 ರಿಂದ 7 ರವರೆಗೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರಿಂದ ಕೊಪ್ಪಳ ಜಿಲ್ಲಾ ಪ್ರವಾಸ

ಕೊಪ್ಪಳ,ಫೆ.01-

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಫೆಬ್ರವರಿ 5 ರಿಂದ 7 ರವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಅಧ್ಯಕ್ಷರು ಫೆ.5 ರಂದು ಬೆಳಿಗ್ಗೆ 6.30 ಗಂಟೆಗೆ ಕೊಪ್ಪಳಕ್ಕೆ ಆಗಮಿಸುವರು. ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಪಿಯು ಹಾಗೂ ಪದವಿ ಕಾಲೇಜು ವಿದ್ಯಾರ್ಥಿನಿಯರ ಜೊತೆ ಸಂವಾದ ನಡೆಸುವರು. ಮಧ್ಯಾಹ್ನ 2 ಗಂಟೆಗೆ ಕೊಪ್ಪಳದ ವಾರ್ಡ್ ನಂ.28, ಸಿದ್ದೇಶ್ವರ ನಗರದ ಅಲೆಮಾರಿ ಕಾಲೋನಿಗೆ ಭೇಟಿ ನೀಡಿ, ಅಲೆಮಾರಿ ಸಮುದಾಯದ ಮಹಿಳೆಯರ ಸಮಸ್ಯೆಗಳನ್ನು ಆಲಿಸುವರು. ಮಧ್ಯಾಹ್ನ 3 ಗಂಟೆಗೆ ಕೊಪ್ಪಳ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ದೇವದಾಸಿ ಮಹಿಳೆಯರೊಂದಿಗೆ ಸಂವಾದ ನಡೆಸುವರು. ಸಂಜೆ 6 ಗಂಟೆಗೆ ಕೊಪ್ಪಳದ ಅಲ್ಪಸಂಖ್ಯಾತ ಇಲಾಖೆಯ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿನಿಲಯಕ್ಕೆ ಭೇಟಿ ನೀಡುವರು. ಅಂದು ರಾತ್ರಿ ಕೊಪ್ಪಳದಲ್ಲಿಯೇ ವಾಸ್ತವ್ಯ ಮಾಡುವರು.

ಫೆ.6 ರಂದು ಬೆಳಿಗ್ಗೆ 10 ಗಂಟೆಗೆ ಅಧ್ಯಕ್ಷರು ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆಸ್ಪತ್ರೆ ಹಾಗೂ ಕೊಪ್ಪಳ ಜಿಲ್ಲಾಸ್ಪತ್ರೆಗೆ ಭೇಟಿ ನೀಡುವರು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಆಯೋಜಿಸಿರುವ ಕಔಖಊ ಅಲನಿಯಮ 2013ರ ತರಬೇತಿ ಹಾಗೂ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸುವರು. ಮಧ್ಯಾಹ್ನ 12 ಗಂಟೆಗೆ ಕೊಪ್ಪಳದಿಂದ ನಿರ್ಗಮಿಸಿ 1.15 ಗಂಟೆಗೆ ಕುಷ್ಟಗಿಗೆ ತೆರಳಿ, ಕುಷ್ಟಗಿ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡುವರು. ಮಧ್ಯಾಹ್ನ 3 ಗಂಟೆಗೆ ಕುಷ್ಟಗಿ ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 5 ಗಂಟೆಗೆ ಕುಷ್ಟಗಿಯ ಸಮಾಜ ಕಲ್ಯಾಣ ಇಲಾಖೆಯ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡುವರು. ಸಂಜೆ 6 ಗಂಟೆಗೆ ಕುಷ್ಟಗಿಯಿಂದ ನಿರ್ಗಮಿಸಿ ರಾತ್ರಿ 7.15 ಗಂಟೆಗೆ ಕೊಪ್ಪಳಕ್ಕೆ ಆಗಮಿಸಿ, ವಾಸ್ತವ್ಯ ಮಾಡುವರು.

ಫೆ.7 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಮಹಿಳಾ ಸ್ಪಂದನಾ ಕಾರ್ಯಕ್ರಮ ಹಾಗೂ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಮಧ್ಯಾಹ್ನ 3 ಗಂಟೆಗೆ ವಿವಿಧ ಮಾಧ್ಯಮದವರೊಂದಿಗೆ ಪತ್ರಿಕಾಗೋಷ್ಠಿ ನಡೆಸುವರು. ಸಂಜೆ 6.30 ಗಂಟೆಗೆ ಕೊಪ್ಪಳದಿಂದ ರೈಲಿನ ಮೂಲಕ ನಿರ್ಗಮಿಸಿ ಬೆಂಗಳೂರಿನ ಕಡೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎನ್.ಎಂ.ಎಂ.ಎಸ್ ಪರೀಕ್ಷೆ: ನಿಷೇದಾಜ್ಞೆ ಜಾರಿ

ಬಾಗಲಕೋಟೆ ,ಫೆ.01-

ಪ್ರಸಕ್ತ ಸಾಲಿನ ನ್ಯಾಷನಲ್ ಮೀನ್ಸ್ ಕಮ್ ಮೆರಿಟ್ (ಎನ್.ಎಂ.ಎಂ.ಎಸ್) ವಿದ್ಯಾರ್ಥಿ ವೇತನಕ್ಕಾಗಿ ಜಿಲ್ಲೆಯ ಬಾದಾಮಿ, ಬಾಗಲಕೋಟೆ, ಬೀಳಗಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ಸೇರಿ ಒಟ್ಟು 32 ಪರೀಕ್ಷಾ ಕೇಂದ್ರಗಳಲ್ಲಿ ಫೆಬ್ರವರಿ 1 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12 ವರೆಗೆ ಮತ್ತು ಮಧ್ಯಾಹ್ನ 2 ರಿಂದ 3.30 ವರೆಗೆ ನಡೆಯಲಿದ್ದು, ಪರೀಕ್ಷೆ ಸುಗಮವಾಗಿ ಯಾವುದೇ ದೋಷವಿಲ್ಲದಂತೆ ನಡೆಸುವ ಉದ್ದೇಶದಿಂದ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಽತ ಪ್ರದೇಶವೆಂದು ಘೋಷಿಸಿ ಜಿಲ್ಲಾಽಕಾರಿಗಳು ಆಗಿರುವ ಜಿಲ್ಲಾ ದಂಡಾಽಕಾರಿ ಸಂಗಪ್ಪ ಆದೇಶ ಹೊರಡಿಸಿದ್ದಾರೆ. ಪರೀಕ್ಷೆ ಪ್ರಾರಂಭವಾಗುವ ಅರ್ದಗಂಟೆ ಮುಂಚಿತವಾಗಿ ಮತ್ತು ಪರೀಕ್ಷಾ ಅವಽ ಮುಗಿಯುವವರೆಗೆ ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿರುವ ಎಲ್ಲ ಝರಾಕ್ಸ್ ಮತ್ತು ಸೈಬರ ಕೇಂದ್ರಗಳನ್ನು ಮುಚ್ಚತಕ್ಕದ್ದೆಂದು ಆದೇಶದಲ್ಲಿ ತಿಳಿಸಿದ್ದಾರೆ.




ಬೀದರ: ಇಂದು ಹುಮನಾಬಾದ್ ತಾಲೂಕಿನ ಮೋಳಕೇರಾ ಗ್ರಾಮದಲ್ಲಿ ಅಕಸ್ಮಿಕವಾಗಿ ಸ್ಫೋಟದಲ್ಲಿ ಗಾಯಗೊಂಡ ಹೈದ್ರಾಬಾದ್ ಮಲ್ಲರೆಡ್ಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಜಬ್ಬಾರ ಎಂಬುವವರನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಭೇಟಿ ಮಾಡಿ ಆರೋಗ್ಯ ವಿಚಾರಿಸಿ ಕುಟುಂಬ ಸದಸ್ಯರಿಗೆ ಸಾಂತ್ವಾನ ಹೇಳಿದರು.

ನಿಮ್ಮೂರು ಸುದ್ದಿ

## ಸಂಪಾದಕೀಯ

# ಮುಂಬಯಿ ಟಿಐಸಿಸಿ ವಿದ್ಯಾರ್ಥಿಗಳ ‘ಕ್ಯಾಂಪಸ್ ರಾಜಕೀಯ’ ದಮನ ಸಲ್ಲದು!




ಟಿಐಎಸ್‌ಎಸ್ ತನ್ನ ಎಲ್ಲ ಘಾತಕ ನೀತಿ-ನಿರ್ಧಾರಗಳನ್ನೂ ಏಕಪಕ್ಷೀಯವಾಗಿ ತೆಗೆದುಕೊಂಡಿದೆ. ವಿದ್ಯಾರ್ಥಿಗಳಿಂದ ಪ್ರತಿಕ್ರಿಯೆ, ಸಲಹೆಗಳನ್ನು ಪಡೆದೇ ಇಲ್ಲವೆಂದು ಕ್ಯಾಂಪಸ್‌ನ ವಿದ್ಯಾರ್ಥಿಗಳು ಆಕ್ರೋಶಗೊಂಡಿದ್ದಾರೆ. ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ.

ಮುಂಬೈನಲ್ಲಿರುವ ಟಿಐಎಸ್‌ಎಸ್ ಭಾರತದ ಪ್ರತಿಷ್ಠಿತ ಉನ್ನತ ಶಿಕ್ಷಣ ಕೇಂದ್ರಗಳಲ್ಲಿ ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸ್ ಸ್ ಒಂದು. ಸಂಸ್ಥೆಯು ಒಂದು ಕಾಲದಲ್ಲಿ, ಸಾಮಾಜಿಕ ನ್ಯಾಯ, ಮಾನವ ಹಕ್ಕುಗಳು ಮತ್ತು ವಿಮರ್ಶಾತ್ಮಕ ಚಿಂತನೆಗೆ ಕೇಂದ್ರವೂ ಆಗಿತ್ತು. ಆದರೆ, ಈಗ ಸಂಸ್ಥೆಯು ವಿದ್ಯಾರ್ಥಿ ಧ್ವನಿಯನ್ನು ಹತ್ತಿಕ್ಕಲು ಮುಂದಾಗಿದೆ. ವಿದ್ಯಾರ್ಥಿಗಳು ರಾಜಕೀಯ ಚಟುವಟಿಕೆ ಮತ್ತು ಸಾಮಾಜಿಕ ಚಿಂತನೆಯಲ್ಲಿ ತೊಡಗದಂತೆ ನಿರ್ಬಂಧ-ನಿಯಂತ್ರಣ ಹೇರುತ್ತಿದೆ. ದಮನಕಾರಿ ನೀತಿ-ನಿಯಮಗಳನ್ನು ರೂಪಿಸಿದೆ. ವಿದ್ಯಾರ್ಥಿಗಳ ಆಕ್ರೋಶಕ್ಕೆ ಗುರಿಯಾಗಿದೆ.

ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಆಡಳಿತದಲ್ಲಿ ಹಲವಾರು ವಿಶ್ವವಿದ್ಯಾಲಯಗಳೂ ವಿದ್ಯಾರ್ಥಿಗಳ ರಾಜಕೀಯ ಚಟುವಟಿಕೆ ಮತ್ತು ಕ್ಯಾಂಪಸ್ ರಾಜಕಾರಣವನ್ನು ನಿರಂತರವಾಗಿ ಹತ್ತಿರುವ ಪ್ರಯತ್ನದಲ್ಲಿವೆ. ಆ ಪಟ್ಟಿಗೆ ಈಗ ಟಾಟಾ ಇನ್‌ಸ್ಟಿಟ್ಯೂಟ್ ಕೂಡ ಸೇರಿಕೊಂಡಿದೆ. ತನ್ನ ವಿದ್ಯಾರ್ಥಿಗಳನ್ನು ತರಗತಿ ಕೊಠಡಿಗಳಲ್ಲಿ ಕೂಡಿಡುವ ಕುತಂತ್ರಕ್ಕೆ ಮುಂದಾಗಿದೆ. ಕ್ಯಾಂಪಸ್ ಚಟುವಟಿಕೆಗಳನ್ನು ಮೊಟಕುಗೊಳಿಸುವ ಹುನ್ನಾರ ರೂಪಿಸಿದೆ.

ಸಂಸ್ಥೆಯು 2024ರಿಂದಲೇ ತನ್ನ ಹಾನರ್ ಕೋಡ್ (ಕ್ಯಾಂಪಸ್ ಸಂಹಿತೆ)ಅನ್ನು ಪರಿಷ್ಕರಿಸುತ್ತಿದೆ. ವಿದ್ಯಾರ್ಥಿಗಳು ರಾಜಕೀಯ ಪಕ್ಷಗಳು, ವಿದ್ಯಾರ್ಥಿಗಳ ಸಂಘಟನೆಗಳೊಂದಿಗೆ ಸಂಬಂಧ ಹೊಂದಿರಬಾರದು, ಪ್ರತಿಭಟನೆ, ಧರಣಿಯಲ್ಲಿ ಭಾಗಿಯಾಗಬಾರದು ಹಾಗೂ ಶೈಕ್ಷಣಿಕ ವಾತಾವರಣಕ್ಕೆ ಅಡ್ಡಿಯಾಗುವ ಯಾವುದೇ ಚಟುವಟಿಕೆಗಳಲ್ಲಿ ಭಾಗಿಯಾಗಬಾರದು ಎಂದು ನಿರ್ಬಂಧ ಹೇರಿದೆ. ವಿದ್ಯಾರ್ಥಿಗಳ ಸಾಮಾಜಿಕ-ರಾಜಕೀಯ ಪ್ರಜ್ಞೆಯನ್ನು ನೇರವಾಗಿ ನಿಗ್ರಹಿಸುತ್ತದೆ.

ಮುಖ್ಯವಾಗಿ, ಈ ವರ್ಷ, ಫೆಬ್ರವರಿ 6ರಂದು ಟಿಐಎಸ್‌ಎಸ್ ಕ್ಯಾಂಪಸ್‌ನಲ್ಲಿನ ವಿದ್ಯಾರ್ಥಿ ಸಂಘದ ಚುನಾವಣೆ ನಡೆಯಲಿದೆ. ಚುನಾವಣೆಗೂ ಮುನ್ನ, ಟಿಐಎಸ್‌ಎಸ್ ಆಡಳಿತವು ವಿದ್ಯಾರ್ಥಿ ಸಂಘವನ್ನು ವಿದ್ಯಾರ್ಥಿ ಮಂಡಳಿಯಾಗಿ ಬದಲಾಯಿಸಿದೆ. ವಿದ್ಯಾರ್ಥಿ ಸಂಘದ ಸಂವಿಧಾನ, ವಿದ್ಯಾರ್ಥಿ ಸಂಘದ ಚುನಾವಣೆಗಳು ಮತ್ತು ವಿದ್ಯಾರ್ಥಿ ಸಂಘದ ಕಾರ್ಯನಿರ್ವಾಹಕ ಸಮಿತಿಯನ್ನು ಸಂಪೂರ್ಣವಾಗಿ ರದ್ದುಗೊಳಿಸಿದೆ. ಸಂಘದ ಕಾರ್ಯನಿರ್ವಹಣೆಯನ್ನು ನಿಯಂತ್ರಿಸುವ ನಿಯಮಗಳನ್ನು ಪರಿಷ್ಕರಿಸಿದೆ.

ಮಾತ್ರವಲ್ಲ, ವಿದ್ಯಾರ್ಥಿ ಮಂಡಳಿಗೆ ಸ್ಪರ್ಧಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ರಾಜಕೀಯ ಪಕ್ಷಗಳು-ಸಂಘಟನೆಗಳು ಹಾಗೂ ವಿದ್ಯಾರ್ಥಿ ಸಂಘಗಳೊಂದಿಗೆ ತಾವು ಸಂಬಂಧ ಹೊಂದಿಲ್ಲ, ಹೊಂದುವುದಿಲ್ಲವೆಂದು ಒಪ್ಪಂದ ಪತ್ರ ಬರೆದುಕೊಡಬೇಕು, ಕನಿಷ್ಠ 75% ಹಾಜರಾತಿ ಹೊಂದಿರಬೇಕು, ಯಾವುದೇ ಶೈಕ್ಷಣಿಕ ಬಾಕಿ (ಬ್ಯಾಕ್‌ಲಾಗ್) ಇಲ್ಲ ಎಂಬುದನ್ನೂ ಘೋಷಿಸಬೇಕು. ಇದು, ಅಕ್ಷರಶಃ ಸಂಸ್ಥೆಯ ಅಸಂಬದ್ಧ ಧೋರಣೆ. ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳ ಚಿಂತನೆಗಳನ್ನು ವಿಶ್ವ ದರ್ಜೆಗೆ ಏರಿಸಬೇಕು. ಆದರೆ, ಟಿಐಎಸ್‌ಎಸ್ ವಿದ್ಯಾರ್ಥಿಗಳ ಚಿಂತನಾ ಕ್ರಮವನ್ನು ಸಂಕುಚಿತಗೊಳಿಸಲು ಮುಂದಾಗಿದೆ.

ಜೊತೆಗೆ, ಶುಲ್ಕ ನಿಗದಿ, ಪಠ್ಯಕ್ರಮ ಚರ್ಚೆಗಳು, ಶಿಸ್ತು ಸಮಿತಿ ಹಾಗೂ ಸಾಮಾನ್ಯ ದೂರು ಸಮಿತಿ ಸೇರಿದಂತೆ ಪ್ರಮುಖ ನಿರ್ಧಾರ ತೆಗೆದುಕೊಳ್ಳುವ ಸಮಿತಿಗಳಿಂದ ವಿದ್ಯಾರ್ಥಿ ಪ್ರತಿನಿಧಿಗಳನ್ನು ಹೊರಹಾಕಿದೆ. ಇದು ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಸಂಘದ ಮೂಲಕ ತಮ್ಮ ಹಕ್ಕುಗಳನ್ನು ಕೇಳುವ, ಸಾಮಾಜಿಕ ವಿಚಾರಗಳಿಗೆ ಪ್ರತಿಕ್ರಿಯಿಸುವ, ಕ್ಯಾಂಪಸ್ ರಾಜಕೀಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದನ್ನು ನಿರ್ಬಂಧಿಸಿದೆ..

ಆಘಾತಕಾರಿಯಾಗಿ, ವಿದ್ಯಾರ್ಥಿಗಳ ಒಗ್ಗಟ್ಟನ್ನು ಮುರಿಯಲು ವಿದ್ಯಾರ್ಥಿ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಪ್ರಧಾನ ಕಾರ್ಯದರ್ಶಿಯನ್ನು ಒಳಗೊಂಡ 7 ಸದಸ್ಯರ ಕಾರ್ಯಕಾರಿ ಸಮಿತಿಯನ್ನೇ ಟಿಐಎಸ್‌ಎಸ್ ರದ್ದುಗೊಳಿಸಿದೆ. ವಿದ್ಯಾರ್ಥಿಗಳ ಬಲಿಷ್ಠ ಸಮಿತಿಯಿಲ್ಲದಂತೆ ಮಾಡಿ, ಪ್ರತಿಯೊಂದು ಕಾರ್ಯಕ್ರಮ ಮತ್ತು ವರ್ಗದಿಂದ (ತರಗತಿ ಮತ್ತು ಪಠ್ಯೇತರ ಚಟುವಟಿಕೆ) ಆಯ್ಕೆಯಾಗುವ ತಲಾ ಒಬ್ಬ ಪ್ರತಿನಿಧಿಯನ್ನು ಒಳಗೊಂಡ ವಿದ್ಯಾರ್ಥಿ ಪರಿಷತ್ತನ್ನು ರಚಿಸಲು ಮುಂದಾಗಿದೆ. ಈ ಪರಿಷತ್ತಿನ ಸದಸ್ಯರನ್ನು ಹಣಕಾಸು, ಸಂಸ್ಕೃತಿ, ಸಾಹಿತ್ಯ ಮತ್ತು ಕ್ರೀಡೆಗಳಂತಹ ವಿವಿಧ ಸಮಿತಿಗಳಿಗೆ ವಿದ್ಯಾರ್ಥಿ ವ್ಯವಹಾರಗಳ ಕಚೇರಿ () ನಾಮನಿರ್ದೇಶನ ಮಾಡುತ್ತದೆ. ಜೊತೆಗೆ, ಚುನಾಯಿತರಲ್ಲದ ವಿದ್ಯಾರ್ಥಿಗಳನ್ನೂ ಸಮಿತಿಗೆ ಆಯ್ಕೆ ಮಾಡುವ ಪರಮಾಧಿಕಾರವೂ ಆಡಳಿತದ್ದೇ ಆಗಿದೆ.

ಚುನಾಯಿತ ಸದಸ್ಯರ ಕಾರ್ಯಕಾರಿ ಮಂಡಳಿ ಇಲ್ಲದ, ಈ ವಿಕೇಂದ್ರೀಕರಣವು ವಿದ್ಯಾರ್ಥಿಗಳ ಪ್ರಾತಿನಿಧಿಕ ಅಧಿಕಾರವನ್ನು ದುರ್ಬಲಗೊಳಿಸಿದೆ. ಸಾಮೂಹಿಕ ಚೌಕಾಸಿ ಶಕ್ತಿಯನ್ನು ಬುಡಮೇಲು ಮಾಡಿದೆ. ತಮ್ಮ ಹಕ್ಕುಗಳಿಗಾಗಿ ಒಗ್ಗಟ್ಟಿನಿಂದ ದನಿ ಎತ್ತುವ ಹಕ್ಕು-ಸ್ವಾತಂತ್ರವನ್ನು ಕಸಿದುಕೊಂಡಿದೆ. ವಿದ್ಯಾರ್ಥಿ ಸಂಘದ ಅಧಿಕಾರವನ್ನು ದುರ್ಬಲಗೊಳಿಸಿ, ಆಡಳಿತದ ನಿಯಂತ್ರಣದ ಅಧಿಕಾರವನ್ನು ಹೆಚ್ಚಿಸಿದೆ.

ಪ್ರಮುಖ ನೀತಿ-ನಿರ್ಧಾರಗಳನ್ನು ರೂಪಿಸುವ ಸಮಿತಿಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಾತಿನಿಧ್ಯ ಇಲ್ಲದೇ ಇರುವುದು ಸಾಂಸ್ಥಿಕ ನಿರ್ಧಾರಗಳಲ್ಲಿ ವಿದ್ಯಾರ್ಥಿಗಳ ದನಿಯನ್ನು ಹತ್ತಿಕ್ಕಿದೆ. ಸಂಸ್ಥೆಯ ಎಲ್ಲ ಪ್ರಮುಖ ಶೈಕ್ಷಣಿಕ ವಿಷಯಗಳಲ್ಲಿ ಶೈಕ್ಷಣಿಕ ಮಂಡಳಿಯು ಅತ್ಯುನ್ನತ ನಿರ್ಧಾರ ತೆಗೆದುಕೊಳ್ಳುತ್ತದೆ. ಇದು, ಕಠಿಣ ನೀತಿ-ನಿಮಯಗಳ ಮೂಲಕ ವಿದ್ಯಾರ್ಥಿಗಳನ್ನು ದಮನಿಸುವ ತಂತ್ರವೇ ಆಗಿದೆ.

ಗಮನಾರ್ಹವಾಗಿ, ಟಿಐಎಸ್‌ಎಸ್ ತನ್ನ ಈ ಎಲ್ಲ ಘಾತಕ ನೀತಿಗಳನ್ನೂ ಏಕಪಕ್ಷೀಯವಾಗಿ ತೆಗೆದುಕೊಂಡಿದೆ. ವಿದ್ಯಾರ್ಥಿಗಳಿಂದ ಪ್ರತಿಕ್ರಿಯೆ, ಸಲಹೆಗಳನ್ನು ಪಡೆದೇ ಇಲ್ಲವೆಂದು ಕ್ಯಾಂಪಸ್‌ನ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ.

ತನ್ನ ಕೃತ್ಯವನ್ನು ಸಮರ್ಥಿಸಿಕೊಂಡಿರುವ ಸಂಸ್ಥೆಯ ಆಡಳಿತ, ಕ್ಯಾಂಪಸ್‌ನಲ್ಲಿ ಆಡಳಿತವನ್ನು ಸುಗಮಗೊಳಿಸಲು ಮತ್ತು ವಿದ್ಯಾರ್ಥಿ ಕಲ್ಯಾಣದ ಮೇಲೆ ಹೆಚ್ಚು ಕೇಂದ್ರೀಕರಿಸಲು ಈ ಬದಲಾವಣೆಗೆ ನೆರವಾಗುತ್ತವೆ ಎಂದು ವಾದಿಸಿದೆ. ವಿದ್ಯಾರ್ಥಿಗಳ ಅಭಿಪ್ರಾಯವನ್ನೂ ಕೇಳಿದ್ದೇವೆಂದು ಹೇಳಿಕೊಂಡಿದೆ.


ಆದರೆ, ವಿದ್ಯಾರ್ಥಿಗಳ ಅಭಿಪ್ರಾಯ ಪಡೆಯುವುದಕ್ಕೂ ಮುನ್ನವೇ, ಚುನಾವಣೆ ನಿಗದಿಯಾಗಿದೆ. ಇದು ಪಾರದರ್ಶಕತೆಯ ಹೆಸರಿನಲ್ಲಿ ನಡೆಯುತ್ತಿರುವ ಸರ್ವಾಧಿಕಾರಿ ದಮನವೆಂದು ವಿದ್ಯಾರ್ಥಿಗಳು ಭಾವಿಸಿದ್ದಾರೆ.

ಈಗಾಗಲೇ, ದೆಹಲಿಯ ಜವಹರಲಾಲ್ ನೆಹರು ವಿಶ್ವವಿದ್ಯಾಲಯದಲ್ಲಿ (ಜೆಎನ್‌ಯು) 2016ರ ನಂತರ ಅಲ್ಲಿನ ಆಡಳಿತವು ದಮನಕಾರಿ ಕ್ರಮಗಳನ್ನು ವಿದ್ಯಾರ್ಥಿಗಳ ಮೇಲೆ ಹೇರಿದೆ. ಎಡ ವಿದ್ಯಾರ್ಥಿಗಳ ಸಂಘವು ಸಕ್ರಿಯವಾಗಿದ್ದ ಜೆಎನ್‌ಯುನಲ್ಲಿ ಕೇಂದ್ರದಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಎಬಿವಿಪಿ ಬಾಲ ಬಿಚ್ಚಲಾರಂಭಿಸಿತು. ಜೆಎನ್‌ಯು ಆಡಳಿತವೂ ಎಬಿವಿಪಿ ತಂತ್ರ-ಕುತಂತ್ರಗಳಿಗೆ ನೆರವು ನೀಡುತ್ತಿದೆ. ಎಡ ಚಿಂತನೆಯುಳ್ಳ ವಿದ್ಯಾರ್ಥಿಗಳನ್ನು ಹತ್ತಿಕ್ಕಲು ಹಲವು ನಿಯಂತ್ರಣಗಳನ್ನು ಹೇರಿದೆ. ವಿದ್ಯಾರ್ಥಿಗಳ ಚಟುವಟಿಕೆಯನ್ನು ಕ್ಯಾಂಪಸ್ ವಿಚಾರಗಳಿಗೆ ಮಾತ್ರ ಸೀಮಿತಗೊಳಿಸಿದೆ. ಅದೇ ರೀತಿ, ಪಶ್ಚಿಮ ಬಂಗಾಳದ ಜಾದವ್‌ಪುರ ವಿಶ್ವವಿದ್ಯಾಲಯದಲ್ಲಿಯೂ ವಿದ್ಯಾರ್ಥಿಗಳ ರಾಜಕೀಯ ಚಟುವಟಿಕೆಗಳನ್ನು ನಿಗ್ರಹಿಸುವ ಆಳಿತಾತ್ಮಕ ಕೃತ್ಯಗಳು ನಡೆದಿವೆ. ಹಲವಾರು ವಿಶ್ವವಿದ್ಯಾಲಯಗಳಲ್ಲಿ ಸಾಮಾಜಿಕ-ರಾಜಕೀಯ ವಿಚಾರಗಳಲ್ಲಿ ವಿದ್ಯಾರ್ಥಿಗಳ ಭಾಗವಹಿಸುವಿಕೆ ಮತ್ತು ಪ್ರತಿಕ್ರಿಯೆಗಳನ್ನು ದಮನಿಸಲಾಗಿದೆ. ವಿಶ್ವವಿದ್ಯಾಲಯಗಳು ಖಾಸಗಿ ಪ್ರಾಥಮಿಕ ಶಾಲೆಗಳನ್ನು ವಿದ್ಯಾರ್ಥಿಗಳನ್ನು ತರಗತಿಯೊಳಗೆ ಕೂಡಿಹಾಕುತ್ತಿದೆ. ಈಗ, ಟಾಟಾ ಇನ್‌ಸ್ಟಿಟ್ಯೂಟ್ ಕೂಡ ವಿದ್ಯಾರ್ಥಿಗಳನ್ನು ಕಟ್ಟಿಹಾಕುತ್ತಿದೆ. ಇದು, ಭಾರತದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿ ಸ್ವಾಯತ್ತತೆ ಮತ್ತು ರಾಜಕೀಯ ಅಭಿವ್ಯಕ್ತಿಯ ಹರಣವನ್ನು ಪ್ರತಿಬಿಂಬಿಸುತ್ತದೆ.

ಟಿಐಎಸ್‌ಎಸ್‌ನ ದಮನಕಾರಿ ಧೋರಣೆಗಳು ಸಂಸ್ಥೆಯು ಈ ಹಿಂದೆ ಹೊಂದಿದ್ದ, ಸಾಮಾಜಿಕ-ಬೌದ್ಧಿಕ ಕೇಂದ್ರ ಎಂಬ ಹೆಗ್ಗಳಿಕೆಗೆ ಮಸಿ ಬಳಿಯುತ್ತವೆ.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

# ಕೇರಳದಲ್ಲಿ ಕುಂಭಮೇಳ ರಾಜಕಾರಣ!




'ಕೇರಳ ಕುಂಭಮೇಳ'ವು ಧಾರ್ಮಿಕ ನಂಬಿಕೆಯ ಸ್ವಾಭಾವಿಕ ಅಭಿವ್ಯಕ್ತಿಯಾಗಿದ್ದರೆ ಸಮಾಜ ಅದನ್ನು ಸ್ವೀಕರಿಸಬಹುದು. ಆದರೆ, ಅದು ಚುನಾವಣಾ ಲಾಭಕ್ಕಾಗಿ, ಹಿಂದುತ್ವ ರಾಜಕಾರಣವನ್ನು ಕೇರಳದ ನೆಲೆಗೆ ಬೇರೂರಿಸಲು ಬಳಸುವ ಉಪಕರಣವಾಗಿದ್ದರೆ, ಅದು ಪ್ರಶ್ನೆಗೆ ಒಳಪಡಲೇಬೇಕು. ಧರ್ಮವನ್ನು ರಾಜಕೀಯ ಆಯುಧವಾಗಿಸುವ ಯಾವುದೇ ಪ್ರಯತ್ನವೂ ಪ್ರಜಾಸತ್ತಾತ್ಮಕ ಹಾಗೂ ಪ್ರಗತಿಪರ ಸಮಾಜಕ್ಕೆ ಅಪಾಯಕಾರಿ ಎಂಬುದನ್ನು ಮರೆಯಬಾರದು.

ಜನರ ಮೌಢ್ಯ, ಪಾಪ-ಪುಣ್ಯಗಳೆಂಬ ಭಯವನ್ನೇ ಬಂಡವಾಳ ಮಾಡಿಕೊಂಡಿರುವವರು ಧರ್ಮದ ದಂಧೆ ಶುರುಮಾಡಿದ್ದಾರೆ. ಗಂಗೆ ಮತ್ತು ತ್ರಿವೇಣಿ ಸಂಗಮದಲ್ಲಿ ಮೂರು ಬಾರಿ ಮುಳುಗಿ ಎದ್ದರೇ ಪಾಪ ತೊಳೆದು ಹೋಗಿ ಪುಣ್ಯ ಲಭಿಸುತ್ತದೆ ಎಂಬ ಭ್ರಾಂತಿಯನ್ನು ಹಬ್ಬಿಸಿದ್ದಾರೆ. ಇದೇ ಭ್ರಾಂತಿಯ ಬಂಡವಾಳದಲ್ಲಿ ಕುಂಭಮೇಳ ಎಂಬ ಅದ್ದೂರಿ ಕಾರ್ಯಕ್ರಮ ನಡೆಸುತ್ತಾರೆ. ಇದರ ಭಾಗವಾಗಿಯೇ ಕಳೆದ ವರ್ಷ(2025) ಜನವರಿ 13ರಿಂದ ಫೆಬ್ರುವರಿ 26ರವರೆಗೆ 45 ದಿನಗಳ ಕಾಲ ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ಮಹಾಕುಂಭಮೇಳವೂ ನಡೆಯಿತು. 144 ವರ್ಷಕ್ಕೊಮ್ಮೆ ನಡೆಯುತ್ತದೆ ಎಂದು ಹೇಳಲಾದ ಆ ಮಹಾ ಕುಂಭಮೇಳದಲ್ಲಿ ಐವತ್ತು ಕೋಟಿ ಜನ ಭಾಗಿಯಾಗಿದ್ದರು ಎನ್ನಲಾಗಿದೆ. ಆದರೆ, ಪುಣ್ಯ ಅರಸಿ ಅಲ್ಲಿಗೆ ಹೋದವರು ಕಾಲ್ತುಳಿತಕ್ಕೆ ತುತ್ತಾಗಿ ಕನಿಷ್ಠ 82 ಜನ ಸಾವನ್ನಪ್ಪಿದ್ದಾರೆ. ಆದರೆ, ಸಾವುಗಳ ಸಂಖ್ಯೆ 37 ಎಂದು ಯೋಗಿ ಸರ್ಕಾರ ವಾದಿಸುತ್ತಿದೆ. ಮಹಾಕುಂಭಮೇಳಕ್ಕೆ ತೆರಳಿದ್ದ 900 ಮಂದಿ ಇಂದಿಗೂ ಕೂಡಾ ಪತ್ತೆಯಾಗಿಲ್ಲ. ಇದೆಲ್ಲವೂ ಕೂಡ ಬಿಜೆಪಿಯ ರಾಜಕೀಯ ತಂತ್ರವೆಂದೇ ಹೇಳಲಾಗುತ್ತದೆ. ಇದೀಗ, ಇಂತಹದೇ ಮತ್ತೊಂದು ರಾಜಕೀಯ ತಂತ್ರವನ್ನು ಹೆಣೆಯಲು ಬಿಜೆಪಿ ಸಜ್ಜಾಗಿದ್ದು, ಚುನಾವಣಾ ಹೊಸ್ತಿಲಿನಲ್ಲಿರುವ ಕೇರಳದ ಕಡೆಗೆ ತನ್ನ ದೃಷ್ಟಿ ಹಾಯಿಸಿದೆ.

ಹೌದು, ಕೇರಳ ವಿಧಾನಸಭಾ ಚುನಾವಣೆ ಸಮೀಪಿಸುತ್ತಿರುವ ಸಂದರ್ಭದಲ್ಲಿ ಕೇರಳ ತನ್ನ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಕುಂಭಮೇಳ ಆಯೋಜಿಸಲು ಮುಂದಾಗಿದೆ.

ಕೇರಳದ ಮಲಪ್ಪುರಂ ಜಿಲ್ಲೆಯ ತಿರುನಾವಾಯದಲ್ಲಿರುವ ನವ ಮುಕುಂದ ದೇವಾಲಯದ ಸ್ನಾನದ ಘಾಟ್‌ಗಳಲ್ಲಿ ಈ ಹಿಂದೆ 12ವರ್ಷಕ್ಕೊಮ್ಮೆ ನಡೆಸುತ್ತಿದ್ದ ಉತ್ಸವ 18ನೇ ಶತಮಾನದಲ್ಲಿಯೇ ನಿಂತಿತ್ತು. ಆ ಬಳಿಕ 2016ರಿಂದ ನದಿ ಪೂಜೆ ಮತ್ತು ಸಾಂಸ್ಕೃತಿಕ ಆಚರಣೆಗಳನ್ನ ಮಾಡತೊಡಗಿದರು. ಈ ಹಿಂದೆ ನಡೆಯುತ್ತಿದ್ದ ಸಾಮಾನ್ಯ ಉತ್ಸವಕ್ಕೆ ಇದೀಗ ಕುಂಭಮೇಳ ಎಂದು ಹೆಸರಿಟ್ಟು ಮತ್ತೆ ಧರ್ಮದ ಹೆಸರಿನಲ್ಲಿ ಹೊಸ ರಾಜಕೀಯ ಹುಟ್ಟುಹಾಕುವತ್ತ ಹಿಂದುತ್ವ ರಾಜಕಾರಣ ದಾಪುಗಾಲಿಡುತ್ತಿದೆ.

ಮುಗಿದು ಹೋದ ಅಧ್ಯಾಯವನ್ನು ಕೆದಕಿ, ಮರುಜೀವ ನೀಡುತ್ತಿರುವ ಇವರ ಆಟಗಳನ್ನ ನೋಡಿದರೇ ಇದು ಧಾರ್ಮಿಕ ಆಚರಣೆಯೋ ಅಥವಾ ಹಿಂದುತ್ವ ರಾಜಕಾರಣದ ಪ್ರಯತ್ನವೋ ಎಂಬ ಅನುಮಾನ ಹುಟ್ಟುತ್ತದೆ.

ಘಾಟ್‌ಗಳ ಪಕ್ಕದಲ್ಲಿ ಹರಿಯುವ ದಕ್ಷಿಣ ಗಂಗಾ ಎಂದೂ ಕರೆಯಲ್ಪಡುವ ಭಾರತಪುಳ ನದಿಯಲ್ಲಿ ಹಲವರು ಮುಳುಗಿ ಎಳುತ್ತಿದ್ದಾರೆ. ಜನವರಿ 18ರಂದು ಆರಂಭವಾಗಿರುವ ಈ ಕುಂಭಮೇಳ ಫೆಬ್ರವರಿ 3ರಂದು ಕೊನೆಗೊಳ್ಳಲಿದೆ. ಮಲಪ್ಪುರಂ ಜಿಲ್ಲೆಯ ತಿರುನವಾಯ ನವ ಮುಕುಂದ ದೇವಾಲಯದ ಮುಂದೆ ಭಾರತಪುಳ ನದಿಯ ದಡದಲ್ಲಿ ನಡೆಯಲಿದೆ.

18 ದಿನಗಳ ಮೇಳಕ್ಕಾಗಿ ಹತ್ತಾರು ಸಾವಿರ ಜನರು ಘಾಟ್‌ಗಳಿಗೆ ತೆರಳುತ್ತಿದ್ದಾರೆ. ಭಕ್ತರು ಪವಿತ್ರ ಸ್ನಾನವನ್ನು ಮಾಡುವಾಗ 24 ಗಂಟೆಗಳ ಕಾಲ ವೇದ ಮಂತ್ರಗಳು ಪ್ರತಿಧ್ವನಿಸುತ್ತವೆ. ಸಂಜೆಯ ಹೊತ್ತಿಗೆ, ವಾರಣಾಸಿಯ ದಶಾಶ್ವಮೇಧ ಘಾಟ್‌ನಲ್ಲಿ ಪ್ರಸಿದ್ಧ ಗಂಗಾ ಆರತಿಯನ್ನು ನಡೆಸಲಾಗುತ್ತದೆ. ನೀಲ ಆರತಿ ಮಾಡುವ ಕಾಶಿ ವಿಶ್ವನಾಥ ದೇವಾಲಯದ ಪುರೋಹಿತರು ಸೇರಿದಂತೆ ಕೇಸರಿ ವಸ್ತ್ರ ಧರಿಸಿದ ಸಾಧುಗಳು ಇರುತ್ತಾರೆ.

ಹಿಂದುತ್ವ ಆಚರಣೆಯ ರೂವಾರಿ ಮಾತಾ ಅಮೃತಾನಂದಮಯಿ ಈ ಮೇಳದ ಮುಖ್ಯ ಪೋಷಕಿ. ಕೇರಳ ದೇವಸ್ವಮ್ ಮಂತ್ರಿ ಮತ್ತು ಸಿಪಿಐ ಎಂ ನಾಯಕ ವಿ.ಎನ್. ವಾಸವನ್ ಈ ಆಚರಣೆಯ ಪ್ರಧಾನ ಪೋಷಕರಲ್ಲೊಬ್ಬರು.

ಈ ಮೇಳದ ಪ್ರಮುಖ ಪ್ರೇರಕರು ಸ್ವಾಮಿ ಆನಂದವಂ ಭಾರತಿ, ಇವರು ಸಿಪಿಐ(ಎಂ) ವಿದ್ಯಾರ್ಥಿ ವಿಭಾಗ ಎಸ್‌ಎಫ್‌ಐ (ಭಾರತೀಯ ವಿದ್ಯಾರ್ಥಿ ಒಕ್ಕೂಟ)ದ ಮಾಜಿ ನಾಯಕರಾಗಿದ್ದು, ಈಗ ವಾರಣಾಸಿ ಮೂಲದ ಶ್ರೀ ಪಂಚ ದಶನಂ ಜುನಾ ಅಖಾಡದ ಹಿರಿಯ ಸನ್ಯಾಸಿಯಾಗಿದ್ದಾರೆ.

''ತಿರುನವಾಯದಲ್ಲಿ ಈ ಹಿಂದೆ ಅಸ್ತಿತ್ವದಲ್ಲಿರುವ ಸಂಸ್ಕೃತಿ ಮತ್ತು ಸಂಪ್ರದಾಯವನ್ನು ಪುನರುಜ್ಜೀವನಗೊಳಿಸುತ್ತಿದ್ದೇವೆ. ಕೇರಳದಲ್ಲಿ ನಾನಾ ಕಾರಣಗಳಿಂದ ಹಿಂದಕ್ಕೆ ತಳ್ಳಲ್ಪಟ್ಟಿದ್ದ ಹಿಂದೂ ಧರ್ಮ ಮತ್ತು ಧರ್ಮದ ಆಚರಣೆ ಈಗ ಪುನರುಜ್ಜೀವನವಾಗಿದೆ. ಈ ಉತ್ಸವದಲ್ಲಿ ಮಹಾಕುಂಭಮೇಳದ ಎಲ್ಲ ಆಚರಣೆಗಳನ್ನು ಜಾರಿಗೆ ತಂದಿದ್ದೇವೆ. ಸಾವಿರಾರು ಸಾಧುಗಳು ಈಗಾಗಲೇ ಇಲ್ಲಿದ್ದಾರೆ. ಇದ್ದರೂ ಇನ್ನೂ ಸುಮಾರು 750ಕ್ಕೂ ಹೆಚ್ಚು ಜನರು ಬರುವ ನಿರೀಕ್ಷೆಯಿದೆ'' ಎಂದು ಆನಂದವಂ ಭಾರತಿ ಹೇಳಿದ್ದಾರೆ.

''ಸನಾತನ ಧರ್ಮವನ್ನು ಎತ್ತಿಹಿಡಿಯುವಲ್ಲಿ ಹಿಂದುಳಿದಿರುವ ಕೇರಳದ ದಿಕ್ಕನ್ನೇ ಈ ಕುಂಭಮೇಳ ಬದಲಾಯಿಸಲಿದೆ'' ಎಂದು ಸ್ವಾಮಿ ಮುಕುಂದಾನಂದಗಿರಿ ಹೇಳುತ್ತಾರೆ.

ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ವಿ.ಪಿ. ಅನಿಲ್, ''ಕುಂಭಮೇಳವನ್ನು ನಾವು ವಿರೋಧಿಸುವುದಿಲ್ಲ, ಹಾಗಂತ, ಬೆಂಬಲಿಸುವುದೂ ಇಲ್ಲ. ಈ ಕಾರ್ಯಕ್ರಮವನ್ನು ಕೋಮು ಆಧಾರದ ಮೇಲೆ ಬಳಸಿಕೊಳ್ಳಲು ಯಾವುದೇ ಪ್ರಯತ್ನ ನಡೆದರೆ, ನಮ್ಮ ಪಕ್ಷವು ಮಧ್ಯಪ್ರವೇಶಿಸುತ್ತದೆ'' ಎಂದು ಎಚ್ಚರಿಕೆಯ ಮಾತನಾಡಿದ್ದಾರೆ.

ಈಗಾಗಲೇ, ಕುಂಭಮೇಳ ಆಯೋಜಕರ ವಿರುದ್ಧ ನದಿಯ ಮೇಲಿನ ಅತಿಕ್ರಮಣ, ಪರಿಸರ ಹಾನಿ ಆರೋಪಗಳೂ ಕೇಳಿಬಂದಿವೆ. ತಿರುನವಾಯ ಗ್ರಾಮ ಅಧಿಕಾರಿಗಳು ನೋಟಿಸ್ ಕೂಡ ಹೊರಡಿಸಿದ್ದರು. ಆದರೆ, ಇದನ್ನ ಲೆಕ್ಕಿಸದೆಯೇ ಆಯೋಜಕರು ಕುಂಭಮೇಳದಲ್ಲಿ ಮೀಯುತ್ತಿದ್ದಾರೆ.

ಅಂದಹಾಗೆ, ತಿರುನವಾಯದಲ್ಲಿರುವ ಭಾರತಪುಳ ದಡವು ಎರಡು ಸ್ಥಳೀಯ ರಾಜರಾದ ಝುಮೋರಿನ್ ಮತ್ತು ವಲ್ಲುವಕೋಣತಿರಿ ನಡುವಿನ ರಕ್ತಸಿಕ್ತ ಯುದ್ಧಗಳಿಗೆ ಸಾಕ್ಷಿಯಾಗಿತ್ತು. ಆ ಕದನಗಳನ್ನು ಗುರುತಿಸಲು 18ನೇ ಶತಮಾನದ ಅಂತ್ಯದವರೆಗೂ ಪ್ರತಿ 12 ವರ್ಷಗಳಿಗೊಮ್ಮೆ ಮಾಮಂಕಂ ಅಥವಾ ಮಹಾಮಾಘಂ ನಡೆಸಲಾಗುತ್ತಿತ್ತು ಎಂಬುದನ್ನು ಇತಿಹಾಸ ಹೇಳುತ್ತದೆ. ಆ ಉತ್ಸವಗಳು ಕಳೆದ 200ಕ್ಕೂ ಹೆಚ್ಚು ವರ್ಷಗಳಿಂದ ನಡೆದಿರಲಿಲ್ಲ.

2016ರಲ್ಲಿ ದೇವಾಲಯದ ಪ್ರಧಾನ ಅರ್ಚಕರು ಪ್ರಾಚೀನ ಮಹಾಮಾಘಂ ಸಂಪ್ರದಾಯವನ್ನು ಪುನರುಜ್ಜೀವನಗೊಳಿಸುವ ಭಾಗವಾಗಿ ಭಾರತಪುಳದಲ್ಲಿ ನದಿ ಪೂಜಾ ವಿಧಿಗಳನ್ನು ಪ್ರಾರಂಭಿಸಿದ್ದರು. ಕೋವಿಡ್ -19 ಸಾಂಕ್ರಾಮಿಕ ಸಮಯದಲ್ಲಿ ಹೊರತುಪಡಿಸಿ, ಈ ಆಚರಣೆಗಳು ನಿಯಮಿತವಾಗಿ ಮುಂದುವರೆದಿದ್ದವು. 2016ರಲ್ಲಿ, ನವ ಮುಕುಂದ ದೇವಾಲಯದಲ್ಲಿ ಮಾಘ ಮಾಸದಲ್ಲಿ ಸರಳವಾಗಿ ನದಿ ಪೂಜೆ ನಡೆಸಲಾಗಿತ್ತು. ಆ ಮೂಲಕ, ಮಾಮಂಕಂ ಅನ್ನು ನೆನಪಿಸಲಾಗಿತ್ತು. ಈಗ, ಬಿಜೆಪಿ ಸರ್ಕಾರವು ತನ್ನ ಮತ ಬ್ಯಾಂಕ್‌ಗಾಗಿ ಭಾರತಪುಳ ನದಿ ತೀರದ ಪೂಜೆಯನ್ನು ಮಹಾ ಕುಂಭಮೇಳವಾಗಿ ಪರಿವರ್ತಿಸಲು ಮುಂದಾಗಿದೆ.

ಮಧ್ಯ ಕೇರಳದ ಮೂಲಕ 209 ಕಿ.ಮೀ. ಹರಿಯುವ ಭಾರತಪುಳ ನದಿ, ಶತಮಾನಗಳಿಂದ ಭತ್ತದ ಕೃಷಿ ಮತ್ತು ಮಸಾಲೆ ಉತ್ಪಾದನೆಯ ಕೇಂದ್ರಬಿಂದುವಾಗಿದೆ. ಗಮನಾರ್ಹವಾಗಿ, ಚೇರ ರಾಜವಂಶದ ಅವಧಿಯಲ್ಲಿ ನದಿಯ ನೌಕಾಯಾನವು ಮಲಬಾರ್ ಕರಾವಳಿಗೆ ಸಂಪತ್ತು ಮತ್ತು ವಿಶ್ವಮಾನವತೆಯನ್ನು ತಂದುಕೊಟ್ಟಿತು. ಅರೇಬಿಯನ್ ಸಮುದ್ರದೊಂದಿಗೆ ಸಂಪರ್ಕ ಹೊಂದಿತ್ತು. ಅಂತಾರಾಷ್ಟ್ರೀಯ ಬಂದರುಗಳಿಗೆ ಮಸಾಲೆಗಳು, ದಂತ ಮತ್ತು ರತ್ನಗಳನ್ನು ರಫ್ತು ಮಾಡಲು ಅನುಕೂಲ ಮಾಡಿಕೊಟ್ಟಿತ್ತು.

ಪ್ರಸ್ತುತ, ಸಾವಿರಾರು ಹೆಕ್ಟೇರ್ ಪ್ರದೇಶದ ಕೃಷಿಗೆ ನೀರೊದಗಿಸುವ ಈ ನದಿ ತನ್ನ ಹರಿವಿನ ಉದ್ದಕ್ಕೂ ಅನಿಯಂತ್ರಿತ ಮರಳು ಗಣಿಗಾರಿಕೆ, ತ್ಯಾಜ್ಯ ಸುರಿಯುವಿಕೆ, ಅವೈಜ್ಞಾನಿಕ ನಿರ್ಮಾಣ ಮತ್ತು ಅರಣ್ಯನಾಶದಿಂದಾಗಿ ಈಗಾಗಲೇ ಅತಿಯಾದ ಶೋಷಣೆಗೆ ಒಳಗಾಗಿದೆ.

ಈಗ, ಕುಂಭಮೇಳದ ಕೊಳಕನ್ನೂ ಹೊರಬೇಕಾದ ಪರಿಸ್ಥಿತಿ ಎದುರಾಗಿದೆ. ಕಳೆದ ವರ್ಷ ಪ್ರಯಾಗರಾಜ್‌ನಲ್ಲಿ ನಡೆದ ಕುಂಭಮೇಳದಲ್ಲಿ ಲಕ್ಷಾಂತರ ಜನರು ಗಂಗಾ ನದಿಯಲ್ಲಿ ಮುಳುಗಿ ಎದ್ದಿದ್ದಾರೆ. ಆದರೆ, ಈ ನೀರು ಅತಿಯಾದ ಮಲದ ಬ್ಯಾಕ್ಟೀರಿಯಾ ಮತ್ತು ತ್ಯಾಜ್ಯದಿಂದಾಗಿ ಕಲುಷಿತಗೊಂಡಿದ್ದು, ಸ್ನಾನಕ್ಕೆ ಈ ನೀರು ಯೋಗ್ಯವಾಗಿಲ್ಲವೆಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ () ವರದಿಗಳು ಹೇಳಿವೆ. 55 ಕೋಟಿಗೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದರೂ, ಹಲವರು ಅನಾರೋಗ್ಯಕ್ಕೆ ತುತ್ತಾಗಿದ್ದಾರೆಂಬ ಆರೋಪಗಳಿವೆ. ಹೀಗಿರುವಾಗ, ಕೇರಳದಲ್ಲಿ ನಡೆಯುತ್ತಿರುವ ಈ ಕುಂಭಮೇಳ ನದಿ ನೀರಿಗೆ ಸಂಚಕಾರ ತುರುವುದರಲ್ಲಿ ಸಂಶಯವೇ ಇಲ್ಲ.

ಕೇರಳದಲ್ಲಿ ರಾಜಕೀಯ ಲಾಭದಾಸೆಗೆ ಧರ್ಮದ ಪುನರುಜ್ಜೀವನ ಎಂದು ಹೇಳಿ ನದಿ ಪರಿಸರ ಹಾಳು ಮಾಡುವತ್ತ ಸಾಗಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸುರಕ್ಷಿತವಾಗಿ ಕೈಗೊಳ್ಳಲು ಪರಿಸರ ಜವಾಬ್ದಾರಿ ಎಂಬ ಮೂಲಭೂತ ತತ್ವದ ಅಗತ್ಯವಿದೆ. ಈ ರೀತಿ ಧಾರ್ಮಿಕ ಆಚರಣೆಗಳನ್ನ ಮಾಡುವ ಮೊದಲು ನಮಗೆ ನಾವೇ ಕೇಳಿಕೊಳ್ಳಬೇಕಿದೆ. ಪುನರುಜ್ಜೀವನ ಯಾರಿಗಾಗಿ? ನದಿ ಸತ್ತರೆ, ನಾವು ಪುನರುಜ್ಜೀವನಗೊಳಿಸುತ್ತಿರುವುದು ನಿಖರವಾಗಿ ಏನನ್ನ?

ತಿರುನವಾಯದ ಇತಿಹಾಸದಲ್ಲಿ ನಡೆದ ಮಾಮಾಂಕಂ ಮೇಳವು ಧಾರ್ಮಿಕ ಶ್ರದ್ಧೆಯ ಉತ್ಸವಕ್ಕಿಂತ ರಾಜಕೀಯ ಪ್ರಭುತ್ವದ ಘೋಷಣೆಯಾಗಿತ್ತು. ಸಾಮೂರಿ ಮತ್ತು ವಳ್ಳುವಕೋನಾತಿರಿ ಎಂಬ ಸ್ಥಳೀಯ ರಾಜವಂಶಗಳ ನಡುವಿನ ಅಧಿಕಾರ ಸಂಘರ್ಷ ಈ ಮೇಳದ ಹೃದಯವಾಗಿತ್ತು. ಯುದ್ಧ ಮತ್ತು ಆತ್ಮಾಹುತಿಯ ಮೂಲಕ ಶಕ್ತಿಯನ್ನು ಪ್ರದರ್ಶಿಸಲಾಗುತ್ತಿತ್ತು. ನವಮುಕುಂದ ದೇವಸ್ಥಾನ ಹಾಗೂ ಭಾರತಪುಳ ನದಿ ಮೇಳದ ಕೇಂದ್ರವಾಗಿದ್ದರೂ, ಧರ್ಮವು ಅಲ್ಲಿ ಪ್ರಧಾನವಾಗಿರಲಿಲ್ಲ; ಅದು ರಾಜಕೀಯ ಹೋರಾಟಕ್ಕೆ ಹಿನ್ನೆಲೆಯಾಗಿ ಮಾತ್ರ ಬಳಕೆಯಾಗಿತ್ತು. ಇಂತಹ ಇತಿಹಾಸ ಹೊಂದಿರುವ ಸ್ಥಳದಲ್ಲಿ ಇಂದು ಕುಂಭಮೇಳ ಮಾದರಿಯ ಧಾರ್ಮಿಕ ಉತ್ಸವವನ್ನು ಪುನರ್ ರಚಿಸುವುದು ಕೇವಲ ಸಾಂಸ್ಕೃತಿಕ ಪುನರುಜ್ಜೀವನವೋ, ಅಥವಾ ಇತಿಹಾಸದಲ್ಲೇ ಅಧಿಕಾರದ ಸಂಕೇತವಾಗಿದ್ದ ಸ್ಥಳವನ್ನು ಮತ್ತೆ ಗುರುತು ರಾಜಕಾರಣದ ವೇದಿಕೆಯಾಗಿಸುವ ಪ್ರಯತ್ನವೋ ಎಂಬ ಪ್ರಶ್ನೆಯನ್ನು ಎತ್ತುತ್ತದೆ.

ಮುಂದಿನ ವಿಧಾನಸಭಾ ಚುನಾವಣೆಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡು, ಬಿಜೆಪಿ ಕೇರಳದಲ್ಲಿ ತನ್ನ ರಾಜಕೀಯ ನೆಲೆಯನ್ನು ವಿಸ್ತರಿಸಲು ಹಿಂದುತ್ವದ ಕಾರ್ಡ್ ಬಳಸುತ್ತಿದೆ. ಉತ್ತರ ಭಾರತದಲ್ಲಿ ಪ್ರಯೋಗಿಸಿದ ಧಾರ್ಮಿಕ ಧ್ರುವೀಕರಣದ ಮಾದರಿಯನ್ನು ಕೇರಳದಲ್ಲೂ ಜಾರಿಗೆ ತರುವ ಪ್ರಯತ್ನವಾಗಿ ಕೇರಳ ಕುಂಭಮೇಳ ನಡೆಸುತ್ತಿದೆ. ಧರ್ಮವನ್ನು ಸಾಂಸ್ಕೃತಿಕ ಆಚರಣೆಯಿಂದ ಹೊರತೆಗೆದು, ರಾಜಕೀಯ ಗುರುತಾಗಿ ರೂಪಿಸುವುದೇ ಈ ಕಾರ್ಯತಂತ್ರದ ಮೂಲ ಉದ್ದೇಶವೆಂಬ ಟೀಕೆಯೂ ಇದೆ.

ಇಂತಹ ಪ್ರಯತ್ನಗಳು ಕೇರಳದ ಬಹುಧರ್ಮ, ಬಹುಸಂಸ್ಕೃತಿ ಸಹಬಾಳ್ವೆಗೆ ಸವಾಲಾಗಬಹುದು. ಕೇರಳವು ಹಿಂದು-ಮುಸ್ಲಿಂ-ಕ್ರೈಸ್ತ ಸಮುದಾಯಗಳ ನಡುವೆ ಸೌಹಾರ್ದತೆಯನ್ನು ಉಳಿಸಿಕೊಂಡ ರಾಜ್ಯ. ಇಲ್ಲಿ ಧಾರ್ಮಿಕ ಹಬ್ಬಗಳು ಪರಸ್ಪರ ಗೌರವದೊಂದಿಗೆ ಆಚರಿಸಲ್ಪಡುತ್ತವೆ. ಆದರೆ, ಒಂದು ನಿರ್ದಿಷ್ಟ ರಾಜಕೀಯ ಸಿದ್ಧಾಂತವನ್ನು ಬಲಪಡಿಸಲು ಧಾರ್ಮಿಕ ಮಹೋತ್ಸವಗಳನ್ನು ಬಳಸಿದರೆ, ಅದು ಸಮಾಜದಲ್ಲಿ ಅನಗತ್ಯ ಧ್ರುವೀಕರಣಕ್ಕೆ ದಾರಿ ಮಾಡಿಕೊಡುವ ಅಪಾಯವಿದೆ.

ಅಂತಿಮವಾಗಿ, ಕೇರಳ ಕುಂಭಮೇಳವು ಧಾರ್ಮಿಕ ನಂಬಿಕೆಯ ಸ್ವಾಭಾವಿಕ ಅಭಿವ್ಯಕ್ತಿಯಾಗಿದ್ದರೆ ಸಮಾಜ ಅದನ್ನು ಸ್ವೀಕರಿಸಬಹುದು. ಆದರೆ, ಅದು ಚುನಾವಣಾ ಲಾಭಕ್ಕಾಗಿ, ಹಿಂದುತ್ವ ರಾಜಕಾರಣವನ್ನು ಕೇರಳದ ನೆಲೆಗೆ ಬೇರೂರಿಸಲು ಬಳಸುವ ಉಪಕರಣವಾಗಿದ್ದರೆ, ಅದು ಪ್ರಶ್ನೆಗೆ ಒಳಪಡಲೇಬೇಕು. ಧರ್ಮವನ್ನು ರಾಜಕೀಯ ಆಯುಧವಾಗಿಸುವ ಯಾವುದೇ ಪ್ರಯತ್ನವೂ ಪ್ರಜಾಸತ್ತಾತ್ಮಕ ಹಾಗೂ ಪ್ರಗತಿಪರ ಸಮಾಜಕ್ಕೆ ಅಪಾಯಕಾರಿ ಎಂಬುದನ್ನು ಮರೆಯಬಾರದು.

# ಕೇರಳದ ಎಂಟು ಸಾಧಕರಿಗೆ ಪದ್ಮ ಪ್ರಶಸ್ತಿ ಎಂಬ ಮೋದಿ ತಂತ್ರ: ಮತ ಬ್ಯಾಂಕ್‌ಗಾಗಿ ಬಿಜೆಪಿ ಅಸ್ತ್ರ!

ಯುಡಿಎಫ್ ಕ್ರೈಸ್ತ ಮತ್ತು ಮುಸ್ಲಿಮರ ಮತಗಳನ್ನು ಸೆಳೆಯುವ ನಿಟ್ಟಿನಲ್ಲಿ ಪ್ರಚಾರದ ಸಿದ್ಧತೆಗಳನ್ನು ಮಾಡಿಕೊಂಡಿದೆ. ಹೀಗಿರುವಾಗ ಎಲ್‌ಡಿಎಫ್‌ನ ನಾಯರ್ ಮತದಾರರನ್ನು ತನ್ನತ್ತ ಸೆಳೆಯುವ ಯೋಜನೆ ಬಿಜೆಪಿಯದ್ದು. ಇದೀಗ ಮೋದಿಯ ಪದ್ಮ ಪ್ರಶಸ್ತಿ ತಂತ್ರವೇ ಮತ ಬ್ಯಾಂಕ್‌ನ ಅಸ್ತ್ರವಾಗಿದೆ.

ಈ ಬಾರಿ ಪದ್ಮ ಪ್ರಶಸ್ತಿ ಬರೀ ಸಾಧಕರಿಗೆ ನೀಡುವ ಗೌರವವಾಗಿ ಉಳಿದಿಲ್ಲ. ಕೇಂದ್ರದ ಪ್ರಧಾನಿ ನರೇಂದ್ರ ಮೋದಿ ಸರ್ಕಾರವು ಈ ಪ್ರಶಸ್ತಿಯಲ್ಲೂ ರಾಜಕೀಯದಾಟ ಶುರು ಮಾಡಿದೆ. ಕಳೆದ ಬಜೆಟ್ ಸಂದರ್ಭದಲ್ಲಿ ತಮ್ಮ ಮಿತ್ರಪಕ್ಷಗಳು ಇರುವ ರಾಜ್ಯಗಳು ಮತ್ತು ಚುನಾವಣೆ ಎದುರಿಸಲಿರುವ ರಾಜ್ಯಗಳೇ ಹೇಗೆ ಗುರಿಯಾಗಿದ್ದವೋ, ಹಾಗೆಯೇ ಇದೀಗ ಪದ್ಮ ಪ್ರಶಸ್ತಿ. ಯಾವ ರಾಜ್ಯಗಳಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆಯೋ ಆ ರಾಜ್ಯಗಳ ಸಾಧಕರು ಮೋದಿ ಸರ್ಕಾರಕ್ಕೆ ಈ ವರ್ಷ ಕಾಣಿಸಿಕೊಂಡಿದ್ದಾರೆ. ಮೋದಿಯ ಪದ್ಮ ಪ್ರಶಸ್ತಿ ತಂತ್ರವೇ ಮತ ಬ್ಯಾಂಕ್‌ನ ಅಸ್ತ್ರವಾಗಿದೆ.

ಮೋದಿ ಸರ್ಕಾರ ಘೋಷಿಸಿದ ಪದ್ಮ ಪ್ರಶಸ್ತಿಯ ಪಟ್ಟಿಯಲ್ಲಿ ಕೇರಳದ ಎಂಟು ಮಂದಿ ಹೆಸರು ಸೇರಿಕೊಂಡಿದೆ. ಇದರಲ್ಲಿ ಮೂರು ಪದ್ಮವಿಭೂಷಣ ಪ್ರಶಸ್ತಿಗಳೂ ಸೇರಿವೆ. ಮಾಜಿ ಮುಖ್ಯಮಂತ್ರಿ ವಿ.ಎಸ್. ಅಚ್ಯುತಾನಂದನ್ (ಮರಣೋತ್ತರ), ಬರಹಗಾರ/ಪತ್ರಕರ್ತ ಪಿ. ನಾರಾಯಣನ್ ಮತ್ತು ಮಾಜಿ ಸುಪ್ರೀಂ ಕೋರ್ಟ್ ನ್ಯಾಯಾಧೀಶ ಕೆ.ಟಿ. ಥಾಮಸ್ ಅವರಿಗೆ ಪದ್ಮವಿಭೂಷಣ ಪ್ರಶಸ್ತಿ ನೀಡಲಾಗಿದೆ. ಎಡಪಂಥೀಯ ಬೆಂಬಲಿಗ ನಟ ಮಮ್ಮುಟ್ಟಿ ಮತ್ತು ಎಸ್‌ಎನ್‌ಡಿಪಿ ಯೋಗಂ ನಾಯಕ ವೆಲ್ಲಪ್ಪಳ್ಳಿ ನಟೇಶನ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಲಾಗಿದೆ. ನೃತ್ಯ ಪ್ರತಿಭಾನ್ವಿತ ಕಲಾಮಂಡಲಂ ವಿಮಲಾ ಮೆನನ್, ಅರಣ್ಯ ಸಂರಕ್ಷಣಾವಾದಿ ಕೊಲ್ಲಕಯಿಲ್ ದೇವಕಿ ಅಮ್ಮ ಮತ್ತು ಇಸ್ರೋ ವಿಜ್ಞಾನಿ ಎ.ಇ. ಮುತ್ತುನಾಯಗಮ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ನೀಡಲಾಗಿದೆ.

ಪ್ರಮುಖವಾಗಿ ತಮ್ಮ ರಾಜಕೀಯ ವಿರೋಧಿಗಳು, ಎಡಪಂಥೀಯ ನಾಯಕ, ಸಂಘ ಪರಿವಾರದ ಕಟು ಟೀಕಾಕಾರ ಅಚ್ಯುತಾನಂದನ್ ಅವರಿಗೆ ಈ ಪ್ರಶಸ್ತಿ ನೀಡಿರುವುದು ಹೆಚ್ಚು ಚರ್ಚೆಗೆ ಒಳಗಾಗಿರುವುದು. ಈ ಹಿಂದೆ ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ, ಹಿರಿಯ ಕಮ್ಯೂನಿಸ್ಟ್ ನಾಯಕ ಬುದ್ಧದೇವ್ ಭಟ್ಟಾಚಾರ್ಯ 2022ರಲ್ಲಿ ಪ್ರಶಸ್ತಿಯನ್ನು ನಿರಾಕರಿಸಿದ್ದರು. ಆದರೆ ಕೇರಳ ಸಿಪಿಐಎಂ ಮತ್ತು ಅಚ್ಯುತಾನಂದನ್ ಕುಟುಂಬವು ಪ್ರಶಸ್ತಿಯನ್ನು ಸ್ವಾಗತಿಸಿದೆ. ಇದರಿಂದಾಗಿ ಹೆಚ್ಚು ಚರ್ಚೆ ನಡೆಯುತ್ತಿದೆ. ಇವೆಲ್ಲವುದರ ನಡುವೆ ಬಿಜೆಪಿ ಸರ್ಕಾರ ಈ ಪ್ರಶಸ್ತಿ ನೀಡುವುದರ ಹಿಂದೆ 25%ಕ್ಕಿಂತ ಹೆಚ್ಚು ಮತ ಬ್ಯಾಂಕ್ ಅನ್ನು ದೋಚುವ ತಂತ್ರವಿದೆ ಎಂಬುದು ಸ್ಪಷ್ಟ.

ಬಿಜೆಪಿ ಜಾತಿ ಲೆಕ್ಕಾಚಾರ

ಪದ್ಮ ಪ್ರಶಸ್ತಿಗೆ ಮೋದಿ ಸರ್ಕಾರ ಕೇರಳದಲ್ಲಿ ಮಾಡಿರುವ ಆಯ್ಕೆಗಳು ಜಾತಿ ಲೆಕ್ಕಾಚಾರ ಹೊಂದಿದೆ. ಕೇರಳದ ಅತಿದೊಡ್ಡ ಒಬಿಸಿ ಗುಂಪು ಮತ್ತು ಸಾಂಪ್ರದಾಯಿಕ ಎಡ ಪ್ರಜಾಸತ್ತಾತ್ಮಕ ರಂಗ (ಎಲ್‌ಡಿಎಫ್) ಭದ್ರಕೋಟೆಯಾದ ಈಳವ ಸಮುದಾಯವನ್ನು ಮೋದಿ ಸರ್ಕಾರ ಪದ್ಮ ಪ್ರಶಸ್ತಿ ಮೂಲಕ ಸೆಳೆಯುವ ಗುರಿ ಹೊಂದಿದೆ. ಅಚ್ಯುತಾನಂದನ್ ಅವರು ಈಳವ ಸಮುದಾಯಕ್ಕೆ ಸೇರಿರುವ ಕಾರಣ ಈ ಸಮುದಾಯದ ಬೆಂಬಲಗಿಟ್ಟಿಸಿಕೊಳ್ಳುವ ಉದ್ದೇಶದೊಂದಿಗೆ ಅವರಿಗೆ ಪದ್ಮ ಪ್ರಶಸ್ತಿ ನೀಡಲಾಗಿದೆ. ಅದೇ ರೀತಿ ಬಿಜೆಪಿ ಮಿತ್ರಪಕ್ಷವಾದ ಭಾರತ ಧರ್ಮ ಜನಸೇನಾ () ನಾಯಕ ವೆಲ್ಲಪ್ಪಳ್ಳಿ ನಟೇಶನ್ ಅವರಿಗೆ ಪ್ರಶಸ್ತಿ ನೀಡಿರುವುದರಲ್ಲಿ ಆಶ್ಚರ್ಯವೇನಿಲ್ಲ.

ವಿರೋಧ ಕುಗ್ಗಿಸಲು ವಿರೋಧಿಗಳಿಗೆ ಸಮ್ಮಾನ!

ತಮ್ಮ ಸೈದ್ಧಾಂತಿಕ ನಿಲುವಿಗೆ ವಿರೋಧವನ್ನು ಕಡಿಮೆ ಮಾಡುವ ಉದ್ದೇಶದಿಂದಲೇ ವಿರೋಧಿಗಳನ್ನು ಸಮ್ಮಾನಿಸುವುದು ಹೊಸತೇನಲ್ಲ. ಹಾಗೆಯೇ ಬರೀ ತಮ್ಮವರಿಗೆ ದೇಶದ ಅತ್ಯುನ್ನತ ಪ್ರಶಸ್ತಿಗಳನ್ನು ನೀಡಿದರೆ ವಿಪಕ್ಷಗಳ ವಾಗ್ದಾಳಿಗೆ ಗುರಿಯಾಗುವ ಸಾಧ್ಯತೆಯೂ ಇರುತ್ತದೆ. ಇದೇ ಕಾರಣದಿಂದಾಗಿ ಆರ್‌ಎಸ್‌ಎಸ್ ಬೆಂಬಲಿಗರ ಜತೆಗೆ ವಿರೋಧಿಗಳಿಗೂ ಪ್ರಶಸ್ತಿ ನೀಡಿದೆ. ಅಚ್ಯುತಾನಂದನ್ ತಮ್ಮ ಜೀವನದುದ್ದಕ್ಕೂ ಬಿಜೆಪಿ/ಆರ್‌ಎಸ್‌ಎಸ್ ಅನ್ನು ಕಟುವಾಗಿ ಟೀಕಿಸುತ್ತಿದ್ದವರು. ಆದರೆ ಇದೀಗ ಜಾತಿ ಲೆಕ್ಕಾಚಾರದ ಜತೆಗೆ ವಿರೋಧ ಕುಗ್ಗಿಸುವ ತಂತ್ರವನ್ನು ಬಿಜೆಪಿ ಆಯ್ದುಕೊಂಡಿದೆ. ಇನ್ನೊಂದೆಡೆ ಆರ್‌ಎಸ್‌ಎಸ್ ನಾಯಕ ಪಿ. ನಾರಾಯಣನ್ ಅವರಿಗೂ ಗೌರವ ನೀಡಿದೆ.

ಮತದಾರರನ್ನು ಆಕರ್ಷಿಸುವ ತಂತ್ರವೇ?

ಕೇರಳದಲ್ಲಿ ಮತದಾರರ ಲೆಕ್ಕಾಚಾರವೇ ಬೇರೆ. ಪ್ರತಿ ಬಾರಿ ಚುನಾವಣೆ ನಡೆಯುವಾಗಲೂ ಆಡಳಿತರೂಢ ಪಕ್ಷದಿಂದ ವಿರೋಧ ಪಕ್ಷದ ಕೈಗೆ ಅಧಿಕಾರ ನೀಡುವವರು ಕೇರಳಿಗರು. ಕಳೆದ ಬಾರಿ ಮಾತ್ರ ಸತತವಾಗಿ ಎರಡನೇ ಬಾರಿಗೆ ಎಲ್‌ಡಿಎಫ್ ಅನ್ನು ಕೇರಳದ ಜನರು ಗೆಲ್ಲಿಸಿದ್ದಾರೆ. ಈ ಮೂಲಕ ಎಲ್‌ಡಿಎಫ್ 40 ವರ್ಷಗಳ ದಾಖಲೆಯನ್ನು ಮುರಿದಿದೆ. ಇದೀಗ ಮೂರನೇ ಬಾರಿಗೆ ಎಲ್‌ಡಿಎಫ್ ಗೆಲ್ಲಲಿದೆಯೇ ಎಂಬ ಕುತೂಹಲ ಎಲ್ಲರದ್ದು. ಎಲ್‌ಡಿಎಫ್‌ನ ಜನಪರ ಯೋಜನೆಗಳು ಜನರನ್ನು ಆಕರ್ಷಿಸಿದ್ದರೂ ಕೇರಳ ಸಿಎಂ ಪಿಣರಾಯಿ ವಿಜಯನ್ ಅವರು ಅಚ್ಯುತಾನಂದನ್ ಅವರನ್ನು ಕಡೆಗಣಿಸುತ್ತಿದ್ದಾರೆ ಎಂಬ ಭಾವನೆಯನ್ನು ಹಲವು ಯುವಕರು ಹೊಂದಿದ್ದಾರೆ. ಈ ಯುವಕರನ್ನು ತನ್ನತ್ತ ಸೆಳೆಯುವ ತಂತ್ರ ಇದೀಗ ಬಿಜೆಪಿಯದ್ದು.

ಯುಡಿಎಫ್ ಕ್ರೈಸ್ತ ಮತ್ತು ಮುಸ್ಲಿಮರ ಮತಗಳನ್ನು ಸೆಳೆಯುವ ನಿಟ್ಟಿನಲ್ಲಿ ಪ್ರಚಾರದ ಸಿದ್ಧತೆಗಳನ್ನು ಮಾಡಿಕೊಂಡಿದೆ. ಹೀಗಿರುವಾಗ ಎಲ್‌ಡಿಎಫ್‌ನ ನಾಯರ್ ಮತದಾರರನ್ನು ತನ್ನತ್ತ ಸೆಳೆಯುವ ಯೋಜನೆ ಬಿಜೆಪಿಯದ್ದು. ಅದಕ್ಕೆ ಈ ಹಿಂದಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿನ ಗೆಲುವೂ ಬಲ ನೀಡಿದಂತಿದೆ. ಇದರೊಂದಿಗೆ ಬಿಜೆಪಿ ತನ್ನ ಎಂದಿನ ಕೋಮುದ್ವೇಷದ ಹೇಳಿಕೆಗಳನ್ನು ಅಸ್ತ್ರವನ್ನಾಗಿಯೇ ಇರಿಸಿಕೊಂಡಿದೆ. ಅದಕ್ಕಾಗಿಯೇ ಮುಸ್ಲಿಂ ವಿರೋಧಿ ಹೇಳಿಕೆಗಳನ್ನು ನೀಡುತ್ತಾ ಬಂದಿರುವ ವೆಲ್ಲಪ್ಪಳ್ಳಿ ನಟೇಶನ್ ಅವರನ್ನು ಸಾಧಕರಾಗಿ ಗುರುತಿಸಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR